PRGI NO : KNKAN/26/A0884

ಈ ನಮ್ಮ

# ಧೃತಿ ನ್ಯೂಸ್

E NAMMA DHURTHI NEWS KANNADA DAILY NEWS PAPER

ಸದೃಢತೆಯ ಹೆಜ್ಜೆಯೊಂದಿಗೆ..., ಕನ್ನಡ ದಿನಪತ್ರಿಕೆ

- ಕೊಪ್ಪಳ
- ವಿಜಯನಗರ
- ರಾಯಚೂರು
- ಬಳ್ಳಾರಿ
- ಗದಗ
- ಬಾಗಲಕೋಟೆ
- ಹಾವೇರಿ
- ಧಾರವಾಡ

ಸಂಪಾದಕರು: ಚಂದ್ರಕಾಂತ | ಸಂಪುಟ: 01 ಸಂಚಿಕೆ: 172 ಪುಟಗಳು: 04 ಬೆಲೆ: 02 ದಿನಾಂಕ: 25-08-2026 ಮಂಗಳವಾರ | email: enammadhruthinews@gmail.com | Pho : 7353595904

## ಜವಾಬ್ದಾರಿಯುತ ನಾಗರಿಕರಾಗಲು ಸಂವಿಧಾನದ ಅರಿವು ಅತ್ಯವಶ್ಯಕ




**ಧೃತಿ ನ್ಯೂಸ್ ಸುದ್ದಿ**

ಯಲಬುರ್ಗಾ: ಪ್ರತಿಯೊಬ್ಬರೂ ತಮ್ಮ ಹಕ್ಕುಗಳನ್ನು ತಿಳಿದುಕೊಳ್ಳುವುದರ ಜೊತೆಗೆ ಸಂವಿಧಾನಬದ್ಧ ಕರ್ತವ್ಯಗಳನ್ನು ಪ್ರಾಮಾಣಿಕವಾಗಿ ಪಾಲಿಸಿದಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂದು ನ್ಯಾಯವಾದಿ ಡಿ.ಆರ್. ಎಲಿಗಾರ ಹೇಳಿದರು.

ತಾಲೂಕಿನ ಚಿಕ್ಕಮ್ಯಾಗೇರಿ ಗ್ರಾಮದ ನೀಲಮ್ಮ ಶಿವಶಂಕರರಾವ್ ದೇಸಾಯಿ ಸರ್ಕಾರಿ ಪ್ರೌಢಶಾಲೆಯಲ್ಲಿ ತಾಲೂಕು ಕಾನೂನು ಸೇವಾ ಸಮಿತಿಯ ವತಿಯಿಂದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮದ ಅಂಗವಾಗಿ ಮೂಲಭೂತ ಹಕ್ಕುಗಳು ಹಾಗೂ ಕರ್ತವ್ಯಗಳ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಡಿ.ಆರ್. ಎಲಿಗಾರ, ಪ್ರತಿಯೊಬ್ಬ ವಿದ್ಯಾರ್ಥಿಯೂ ಕಾನೂನಿನ ಸಾಮಾನ್ಯ ಜ್ಞಾನವನ್ನು ಹೊಂದುವುದು ಅತ್ಯವಶ್ಯಕ. ಭಾರತದ ಸಂವಿಧಾನವು ನಾಗರಿಕರಿಗೆ ವಿವಿಧ ಮೂಲಭೂತ ಹಕ್ಕುಗಳನ್ನು ನೀಡಿರುವುದರ ಜತೆಗೆ ದೇಶದ ಅಭಿವೃದ್ಧಿ ಹಾಗೂ ಉತ್ತಮ ಸಮಾಜ ನಿರ್ಮಾಣಕ್ಕೆ ಅಗತ್ಯವಾದ ಕರ್ತವ್ಯಗಳನ್ನೂ ವಿಧಿಸಿದೆ ಎಂದು ತಿಳಿಸಿದರು. ಸಂವಿಧಾನದ ಭಾಗ-3ರಲ್ಲಿ ಅನುಚ್ಛೇದ 12ರಿಂದ 35ರವರೆಗೆ ಮೂಲಭೂತ ಹಕ್ಕುಗಳಿಗೆ ಸಂಬಂಧಿಸಿದ ಪ್ರಮುಖ ಅಂಶಗಳನ್ನು ವಿವರಿಸಲಾಗಿದೆ. ಹಕ್ಕುಗಳ ಅರಿವಿನಷ್ಟೇ ಕರ್ತವ್ಯಗಳ ಅರಿವು ಕೂಡ ಪ್ರತಿಯೊಬ್ಬ ನಾಗರಿಕನಿಗೆ ಅಗತ್ಯ. ಹಕ್ಕು ಮತ್ತು ಕರ್ತವ್ಯಗಳು ಪರಸ್ಪರ ಪೂರಕವಾಗಿದ್ದು, ಎರಡನ್ನೂ ಸಮಾನವಾಗಿ ಗೌರವಿಸಬೇಕು ಎಂದು ಅವರು ಹೇಳಿದರು. ವಕೀಲ ಎಚ್.ಎ. ನದಾಫ್ ಮಾತನಾಡಿ, ಹಕ್ಕುಗಳು ಮತ್ತು ಕರ್ತವ್ಯಗಳು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಪ್ರತಿಯೊಬ್ಬರೂ ಸಂವಿಧಾನದ ಆಶಯಗಳನ್ನು ಪಾಲಿಸುವ ಮೂಲಕ ಜವಾಬ್ದಾರಿಯುತ ನಾಗರಿಕರಾಗಿ ಬದುಕಬೇಕು. ಸಮಾಜದಲ್ಲಿ ಉತ್ತಮ ಜೀವನ ನಡೆಸಲು ಕಾನೂನಿನ ಬಗ್ಗೆ ಕನಿಷ್ಠ ಸಾಮಾನ್ಯ ಜ್ಞಾನ ಹೊಂದಿರುವುದು ಅಗತ್ಯ ಎಂದರು. ವಕೀಲ ಪರಶುರಾಮ ದೊಡ್ಮನಿ ಕೂಡ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಡಿ-ಎಂಸಿ ಅಧ್ಯಕ್ಷ ಈರಪ್ಪ ಕುಡಗುಂಟಿ ವಹಿಸಿದ್ದರು. ಈ ಸಂದರ್ಭದಲ್ಲಿ ಗುರುಸಿದ್ದಪ್ಪ ದೇಸಾಯಿ, ಮಾರುತಿ, ಲಕಮನಗುಳೆ, ಹಾಲಪ್ಪ ಚವಡಿ, ಸುರೇಶ ವೇದಪಾಠಕ, ಶಿಕ್ಷಕ ಹನುಮೇಶ, ಪರಮೇಶ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ಇತರರು ಉಪಸ್ಥಿತರಿದ್ದರು.

## ಜಿಲ್ಲೆಯಲ್ಲಿ 13,93,163 ಮತದಾರರ ಕರಡು ಪಟ್ಟಿ ಪ್ರಕಟ : ಜಿಲ್ಲಾ ಚುನಾವಣಾಧಿಕಾರಿ ಪೂವಿತಾ



**ಧೃತಿ ನ್ಯೂಸ್ ಸುದ್ದಿ**

ರಾಯಚೂರು: ಜಿಲ್ಲೆಯ ಎಲ್ಲಾ ಮತಕ್ಷೇತ್ರಗಳಿಗೆ ಸಂಬಂಧಿಸಿದಂತೆ 2026ನೇ ಸಾಲಿನ ಕರಡು ಮತದಾರರ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಲಾಗಿದ್ದು, ಜಿಲ್ಲೆಯಲ್ಲಿ ಒಟ್ಟು 13,93,163 ಮತದಾರರು ಕರಡು ಪಟ್ಟಿಯಲ್ಲಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು.

ಆಗಸ್ಟ್ 24ರ ಸೋಮವಾರ ದಂದು ನಗರದ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯಲ್ಲಿ ಒಟ್ಟು 13,93,163 (ಪುರುಷ, ಮಹಿಳೆ ಮತ್ತು ಇತರೆ ಮತದಾರರು ಒಳಗೊಂಡಂತೆ) ಮತದಾರರು ಇದ್ದಾರೆ. ಹಿಂದಿನ ಮತದಾರರ ಪಟ್ಟಿಯಿಂದ ಒಟ್ಟು 3,21,396 ಮತದಾರರನ್ನು ತೆಗೆದುಹಾಕಲಾಗಿದೆ. ಅದರಲ್ಲಿ ಮರಣ ಹೊಂದಿದವರು 61,385, ಫರ್ಮನೆಂಟ್ ಆಗಿ ಶಿಫ್ಟ್ ಆದವರು 1,87,941, ಆಬ್ಸೆಂಟಿ ಮತದಾರರು 30,733 ಹಾಗೂ 365 ಇತರರು ಒಳಗೊಂಡಿದೆ ಎಂದರು. 2025ರ ಮತದಾರರ ಪಟ್ಟಿಗೆ ಹೋಲಿಸಿದರೆ ಈ ಬಾರಿಯ ಕರಡು ಪಟ್ಟಿಯಲ್ಲಿ 3,21,396 (ಶೇಕಡಾ 18.75%) ಮತದಾರರ ವ್ಯತ್ಯಾಸವಿದೆ. ಯುವ ಮತದಾರರು (18-19 ವಯಸ್ಸು) 11,56,627 ಜನರು ಕರಡು ಪಟ್ಟಿಯಲ್ಲಿದ್ದಾರೆ. ಅಲ್ಲದೆ 17,048 ಮತದಾರರು ವಿವಿಧ ರೀತಿಯಲ್ಲಿ ವಿಕಲಚೇತನ ಮತದಾರರು ಪಟ್ಟಿಯಲ್ಲಿದ್ದಾರೆ. ಮತದಾರರ ಪಟ್ಟಿ ಪರಿಷ್ಕರಣೆ ಮತ್ತು ಹಕ್ಕು/ಆಕ್ಷೇಪಣೆ ಸಲ್ಲಿಸಲು ಅವಧಿ: ಆಗಸ್ಟ್ 27, 2026 ರಿಂದ ಅಕ್ಟೋಬರ್ 22, 2026 ರವರೆಗೆ ಅವಕಾಶ ನೀಡಲಾಗಿದೆ. ಹೊಸ ಮತದಾರರ ನೋಂದಣಿಗೆ ಅಕ್ಟೋಬರ್ 1, 2026ಕ್ಕೆ 18 ವಯಸ್ಸು ಪೂರ್ಣಗೊಳ್ಳುವ ಹೊಸ ಮತದಾರರು ಫಾರ್ಮ್-6 ಅನ್ನು ಆನ್‌ಲೈನ್ ಮೂಲಕ ಅಥವಾ ಬೂತ್ ಮಟ್ಟದ ಅಧಿಕಾರಿಗಳ ಮೂಲಕ ಸಲ್ಲಿಸಿ ತಮ್ಮ ಹೆಸರನ್ನು ಸೇರಿಸಿಕೊಳ್ಳಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದರು. ಎಲ್ಲಾ ಪರಿಷ್ಕರಣೆ ಹಾಗೂ ಆಕ್ಷೇಪಣೆಗಳ ವಿಲೇವಾರಿಯ ನಂತರ ಅಂತಿಮ ಮತದಾರರ ಪಟ್ಟಿಯು ಅಕ್ಟೋಬರ್ 27, 2026 ರಂದು ಬಿಡುಗಡೆಯಾಗಲಿದೆ. ಸಾರ್ವಜನಿಕರು ತಮ್ಮ ಹೆಸರುಗಳ ಪರಿಶೀಲನೆ, ವಿಳಾಸ ಬದಲಾವಣೆ ಅಥವಾ ಹೊಸ ಸೇರ್ಪಡೆಗಾಗಿ ನಿಗದಿತ ಅವಧಿಯೊಳಗೆ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದರು. ಇದೇ ಸಂದರ್ಭದಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾ ಶಾಖೆಯ ಶಿರಸ್ತಾದರ ಋಷಿಕೇಶಿ ಸೇರಿದಂತೆ ಇತರರು ಇದ್ದರು.

### ಎಸ್‌ಐಆರ್ : ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ

# ಕರಡು ಮತದಾರರ ಪಟ್ಟಿ ಪ್ರಕಟ : ಡಾ. ಸುರೇಶ ಬಿ. ಇಟ್ನಾಳ

**ಧೃತಿ ನ್ಯೂಸ್ ಸುದ್ದಿ**

ಕೊಪ್ಪಳ: ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ ಕೊಪ್ಪಳ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಆಗಸ್ಟ್ 24ರಂದು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿನ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದರು.

ಇದೆ ವೇಳೆ ಜಿಲ್ಲಾಧಿಕಾರಿಗಳು ಮಾತನಾಡಿ, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 01.10.2026ರ ಅರ್ಹತಾ ದಿನಾಂಕಕ್ಕೆ ಅನ್ವಯಿಸುವಂತೆ ಕೊಪ್ಪಳ ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್-2026) ಪ್ರಕ್ರಿಯೆನಡೆಯಿತ್ತಿದ್ದು, ಜಿಲ್ಲೆಯಾದ್ಯಂತ ಆಗಸ್ಟ್ 24ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ. ಈ ಬಗ್ಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಆ. 24 ರಿಂದ ಸೆಪ್ಟೆಂಬರ್ 23 ರವರೆಗೆ ಅವಕಾಶವಿದ್ದು, ಅಕ್ಟೋಬರ್ 27ಕ್ಕೆ ಅಂತಿಮ ಮತದಾರರ ಪಟ್ಟಿ ಪ್ರಕಟಣೆಯಾಗಲಿದೆ ಎಂದು ವಿವರಿಸಿದರು.

**ಕರಡು ಮತದಾರರ ವಿವರ:**

ಜಿಲ್ಲೆಯ ಕುಷ್ಟಗಿ, ಕನಕಗಿರಿ, ಗಂಗಾವತಿ, ಯಲಬುರ್ಗಾ, ಕೊಪ್ಪಳ, ಈ 5 ವಿಧಾನಸಭಾ ಕ್ಷೇತ್ರಗಳಲ್ಲಿ 5,19,142 ಪುರುಷ ಮತದಾರರು, 5,22,189 ಮಹಿಳಾಮತದಾರರು ಮತ್ತು 57 ಇತರರು ಸೇರಿ ಜಿಲ್ಲೆಯಲ್ಲಿ ಒಟ್ಟು 10,41,388 ಮತದಾರರಿದ್ದಾರೆ. ಕರಡು ಮತದಾರರ ಪಟ್ಟಿಯನ್ನು ಜಿಲ್ಲೆಯ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಛೇರಿ, ಎಲ್ಲಾ ಮತಗಟ್ಟೆಗಳಲ್ಲಿ ಮತ್ತು ಜಿಲ್ಲಾ ವೆಬ್‌ಸೈಟ್ https://koppal.nic.in ನಲ್ಲಿ ಪ್ರಕಟಿಸಲಾಗಿದೆ. ಜಿಲ್ಲೆಯಲ್ಲಿ 1200 ಕ್ಕಿಂತ ಹೆಚ್ಚು ಮತದಾರರಿರುವ ಕಡೆ 37 ಹೆಚ್ಚುವರಿ ಮತಗಟ್ಟೆಗಳನ್ನು ಸೃಜಿಸಲಾಗಿದ್ದು, ಒಟ್ಟು ಮತಗಟ್ಟೆಗಳ ಸಂಖ್ಯೆ 1,352ಕ್ಕೆ ಏರಿಕೆಯಾಗಿದೆ ಎಂದು ಹೇಳಿದರು. ಗಣತಿ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 1,48,826 ಮತದಾರರನ್ನು ಗೈರು, ವರ್ಗಾವಣೆ, ಮೃತ, ಡುಬ್ಲಿಕೇಟ್ ಮತ್ತು ಇತರೆ (ಎ.ಎಸ್.ಡಿ.ಡಿ.ಒ) ಎಂದು ಗುರುತಿಸಲಾಗಿದ್ದು, ಈ ವಿವರವನ್ನು ಸಹ ಜಿಲ್ಲಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಮತದಾರರ ಪಟ್ಟಿಯಲ್ಲಿ ಹೊಸ ಮತದಾರರ ಹೆಸರು ಸೇರ್ಪಡೆಗೆ ನಮೂನೆ-6, ಅನಿವಾಸಿ ಭಾರತೀಯ-ರಿಗೆ (ಎನ್.ಆರ್.ಐ) ನಮೂನೆ-6ಎ, ಮತದಾರರ ಪಟ್ಟಿಯಿಂದ ಹೆಸರು ತೆಗೆದುಹಾಕಲು ನಮೂನೆ-7 ಹಾಗೂ ತಿದ್ದುಪಡಿಗಾಗಿ ನಮೂನೆ-8 ನ್ನು ಆಯಾ ಬೂತ್ ಮಟ್ಟದ ಅಧಿಕಾರಿಗಳಿಗೆ ಅಥವಾ ECINET ಮೊಬೈಲ್ ಆ?ಯಪ್ / voters.eci.gov.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದರು.



**ವಿಶೇಷ & ಮಿಂಚಿನ ನೋಂದಣಿ ಅಭಿಯಾನ:**

ಹಕ್ಕು ಮತ್ತು ಆಕ್ಷೇಪಣೆಗಳ ಅವಧಿಯಲ್ಲಿ ಪ್ರತಿ ಶನಿವಾರ ಮತ್ತು ಭಾನುವಾರದಂದು (ಆಗಸ್ಟ್ 29, 30 ಹಾಗೂ ಸೆಪ್ಟೆಂಬರ್ 5, 6, 12, 13, 19 ಮತ್ತು 20ರಂದು) ಬೂತ್ ಮಟ್ಟದ ಅಧಿಕಾ-ರಿಗಳನ್ನು ಹಾಗೂ ಇತರೆ ಅಧಿಕಾರಿಗಳನ್ನು ನಿಯೋಜನೆ ಮಾಡುವ ಮೂಲಕ ಅಭಿಯಾನವನ್ನು ಕೈಗೊಳ್ಳಲಾಗುವುದು. ವಸತಿ ಪ್ರದೇಶಗಳು, ಅಪಾರ್ಟ್ಮೆಂಟ್, ಶೈಕ್ಷಣಿಕ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು ಹಾಗೂ ಅರ್ಹ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಇರುವ ಇತರೆ ಸ್ಥಳಗಳಲ್ಲಿ ಮಿಂಚಿನ ನೋಂದಣಿ ಅಭಿಯಾನಗಳನ್ನು ನಡೆಸಿ. ಮತದಾರರ ನೋಂದಣಿಯನ್ನು ಖಚಿತಪಡಿಸಿಕೊಳ್ಳಲಾಗುವುದು. ಇದಲ್ಲದೆ ನಿಗದಿತ ಅವಧಿಯೊಳಗೆ ಭರ್ತಿ ಮಾಡಿದ ಗಣತಿ ನಮೂನೆಯನ್ನು ಸಲ್ಲಿಸಲು ಸಾಧ್ಯವಾಗದ ಮತದಾರರು ಆಗಸ್ಟ್ 24 ರಿಂದ ಸೆಪ್ಟೆಂಬರ್ 23ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳ ಅವಧಿಯಲ್ಲಿ ನಿಗದಿತ ಘೋಷಣಾ ಪತ್ರದೊಂದಿಗೆ ನಮೂನೆ-6 ಅನ್ನು ಸಲ್ಲಿಸಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಸೇರ್ಪಡೆಗೊಳಿಸಬಹುದು ಎಂದು ಹೇಳಿದರು.

ಕೊಪ್ಪಳ ಜಿಲ್ಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆಯು ವ್ಯವಸ್ಥಿತವಾಗಿ ನಡೆಯುವುದಕ್ಕಾಗಿ ಎಲ್ಲಾ ಅಧಿಕಾ-ರಿಗಳು, ವಿಶೇಷವಾಗಿ ಬಿಎಲ್‌ಓ.ಗಳು ಶ್ರಮಿಸಿದ್ದಾರೆ. ಈ ಕಾರ್ಯಕ್ಕೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಮತ್ತು ಬಿಎಲ್‌ಎ.ಗಳು ಸಹ ಅಗತ್ಯ ಸಹಕಾರ ನೀಡಿದ್ದಾರೆ ಎಂದು ಇದೇ ವೇಳೆ ಜಿಲ್ಲಾಧಿಕಾರಿಗಳು ಅಭಿನಂಧಿಸಿದರು.

**ಎಸ್‌ಐಆರ್ ಪ್ರಕ್ರಿಯೆ ಅಚ್ಚುಕಟ್ಟು; ಮೆಚ್ಚುಗೆ:**

ಕೊಪ್ಪಳ ಜಿಲ್ಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆ ಇಲ್ಲಿಯವರೆಗೆ ಅಚ್ಚುಕಟ್ಟಾಗಿ ನಡೆದಿದ್ದು, ಜಿಲ್ಲಾಡಳಿತ ಮತ್ತು ಬಿಎಲ್‌ಓಗಳ ಕಾರ್ಯವು ಶ್ಲಾಘನೀಯವಾಗಿದೆ ಎಂದು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

**ಕರಡು ಮತದಾರರ ಪಟ್ಟಿ ವಿತರಣೆ:**

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆಯ ಕರಡು ಮತದಾರರ ಪಟ್ಟಿಯನ್ನು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಇದೇ ಸಂದರ್ಭದಲ್ಲಿ ವಿತರಣೆ ಮಾಡಲಾಯಿತು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಲ್ಲಾ ಚುನಾವಣಾ ತಹಶೀಲ್ದಾರ ರವಿ ವಸ್ತ್ರದ್, ಜಿಲ್ಲೆಯ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಕೃಷ್ಣ ಇಟ್ಟಂಗಿ, ರಾಜು ಬಾಕ್ಳೆ, ಸೋಮನಗೌಡ, ಕೆ.ಎಸ್ ಮೈಲಾರಪ್ಪ, ಮಹೇಬೂಬಪಾಶಾ ಜಮಖಾಂದಾರ್, ಶರಣು ಶೆಟ್ಟರ್ ಸೇರಿದಂತೆ ಜಿಲ್ಲಾ ಚುನಾವಣಾ ಶಾಖೆಯ ಇತರೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಬುದ್ಧ ಬಸವ ಅಂಬೇಡ್ಕರ್ ರವರ ಸಂದೇಶಗಳು ಪ್ರಸ್ತುತ ಗೋನಾಳ

**ಧೃತಿ ನ್ಯೂಸ್ ಸುದ್ದಿ**

ಕುಕನೂರು: ಇಂದಿನ ಪ್ರಸ್ತುತ ದಿನಗಳಲ್ಲಿ ಬುದ್ಧ ಬಸವ ಅಂಬೇಡ್ಕರ್ ಅವರ ವಿಚಾರಗಳನ್ನು ಅರಿತು ಬರಹಗಳ ರೂಪದಲ್ಲಿ ಹೆಚ್ಚಿನ ಜಾಗ್ರತಿ ಮೂಡಿಸುವುದು ಅಗತ್ಯ ವಿದೆ ಎಂದು ಅಖಿಲ ಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ ಜಿಲ್ಲಾ ಅಧ್ಯಕ್ಷ ಕೊಪ್ಪಳದ ಜಿ. ಎಸ್. ಗೋನಾಳ ಹೇಳಿದರು.

ಭಾನುವಾರ ಇಲ್ಲಿಯ ಶ್ರೀ ಅನ್ನದಾನೇಶ್ವರ ಶಾಖಾ ಮಠದಲ್ಲಿ ಬಸವರಾಜ ಉಪ್ಪಿನವರು ಬರೆದ ಆದ-ುನಿಕ ವಚನಗಳ "ಭಾವ ಬಯಲು" ಚೊಚ್ಚಲ ಕೃತಿಯನ್ನು ಬಿಡುಗಡೆ ಗೊಳಿಸಿ ಮಾತನಾಡಿದರು. ಎಲ್ಲರೂ ವಿವಿಧ ಸಾಹಿತ್ಯ ವನ್ನು ಸುಲಭವಾಗಿ ಬರೆಯುತ್ತಾರೆ ಆದ-ರೆ ವಚನ ಸಾಹಿತ್ಯ ಸುಲಭ ಕೆಲಸ ವಲ್ಲ, ಉಪ್ಪಿನ ಅವರು ಬಸವಾದಿ ಶರಣರ ಆದ-ರ್ಶ ಗುಣಗಳು ಮೈಗೂಡಿಸಿ ಅತ್ಯುತ್ತಮ ಕೃತಿ ರಚಿಸಿದ್ದಾರೆ, ಎಲ್ಲರ ಪ್ರಶಂಸನೀಯ ಪಡೆದ "ಭಾವ ಬಯಲು" ಕೃತಿಯು ಪಠ್ಯಕ್ರಮವಾಗಿ ಹೊರ ಹೊಮ್ಮಲಿ ಎಂದು ಹಾರೈಸಿದರು. ಸಾನಿಧ್ಯವನ್ನು ಪೂಜ್ಯ ಶ್ರೀ ಡಾ. ಮಹಾದೇವ ಮಹಾಸ್ವಾಮಿಗಳು ಅನ್ನದಾನೀಶ್ವರ ಶಾಖಾ ಮಠ ಕುಕನೂರು ವಹಿಸಿದ್ದರು. ಕಾಯ9ಕ್ರಮದ ಅಧ್ಯಕ್ಷತೆಯನ್ನು ಎಂ ಎಸ್ ಹಿರೇಮಠ ನಿವೃತ್ತ ಉಪನ್ಯಾಸಕರು ವಹಿಸಿದ್ದರು. ಹಿರಿಯ ಸಾಹಿತಿ ಡಾ. ಕೆ. ಬಿ. ಬ್ಯಾಳಿ ಸಾಹಿತ್ಯ ರಚನೆ ಪ್ರಕಾರಗಳಲ್ಲಿ ವಚನ ಸಾಹಿತ್ಯ ರಚನೆಯಲ್ಲಿ ಬಹಳಷ್ಟು ವಿಭಿನ್ನವಾಗಿದೆ ಹಾಗೂ ಕನ್ನಡ ಭಾಷೆಯ ಅಮೋಘ ಕೊಡುಗೆ ಎಂದು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಸಾಹಿತಿ ಶ್ರೀ ಭೋಜರಾಜ ಸೋಪಿಮಠ ಅವರು ಪುಸ್ತಕ ಪರಿಚಯ ಮಾಡಿದರು. ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ರುದ್ರಪ್ಪ ಭಂಡಾರಿ,. ಶ್ರೀ ಮಹೇಶ ಸಬರದ ರಾಜ್ಯ ಉಪಾಧ್ಯಕ್ಷರು ಕ ರಾ ಸ ನೌ ಸಂಘ ಬೆಂಗಳೂರು. ಉಮೇಶ ಕಂಬಳಿ ಜಿಲ್ಲಾ ಅಧ್ಯಕ್ಷರು ದೈ.ಶಿ ಸಂಘ ಕೊಪ್ಪಳ. ಶ್ರೀ ಮಾರುತೇಶ ತಳವಾರ ಅಧ್ಯಕ್ಷರು ಪ್ರಾ,ಶಾ,ಶಿ, ಸಂಘ ಕುಕುನೂರ, ಕಳಕಪ್ಪ ಕುಂಬಾರ ಅಧ್ಯಕ್ಷರು ಕಸಾಪ ಕುಕನೂರು, ನಾಗರಾಜ ಬೆಣಕಲ್ಲ ಅಧ್ಯಕ್ಷರು ತಾ ಕಾ ನಿ ಪ ಸಂಘ ಕುಕನೂರು, ಚಂದ್ರು ಬನಾಪುರ ಅಧ್ಯಕ್ಷರು ತಾ ಕಾ ನಿ,ಪೋ ಧ್ವನಿ ಸಂಘ ಕುಕನೂರು, ಬಸವರಾಜ ಕೊಡ್ಲಿ ಅಧ್ಯಕ್ಷರು ಕ,ಕ,ಜಾ,ಸಂಘ ಕುಕನೂರು , ಶರಣಪ್ಪ ಕೊಪ್ಪದ ನಿವೃತ್ತ ಶಿಕ್ಷಕರು ಮುಖ್ಯ ಅತಿಥಿ ಗಳಾಗಿ ಭಾಗ ಆರ್.ಪಿ.ರಾಜೂರ ಹಿರಿಯ ಸಾಹಿತಿಗಳು , ಫಕೀರಪ್ಪ ವಜ್ರಬಂಡಿ, ಕೊಟ್ರೇಶ್ ಉಪ್ಪಿನ ಮುಖ್ಯೋಪಾಧ್ಯಾಯರು ವಹಿಸಿದ್ದರು.

ನಂತರ ವಿವಿಧ ಕನ್ನಡಮ್ಮ ಮನಸ್ಸುಗಳಿಂದ ಕವಿಗೋಷ್ಠಿ ಹಾಗೂ ಜಾನಪದ ಕಲಾವಿದ ಮಹಿಳೆಯ-ರಿಂದ ಸಾಂಸ್ಕೃಕ ಕಾರ್ಯಕ್ರಮಗಳು ಜರುಗಿದವು. ಲೇಖಕ ಬಸವರಾಜ್ ಉಪ್ಪಿನ ಪ್ರಾಸ್ತವಿಕ ಮಾತನಾಡಿದರು. ವಸಂತ ಗುಡಿ ಶಿಕ್ಷಕರು ನಿರೂಪಿಸಿದರು ಮೇಘರಾಜ ಜಿಡಗಿ, ಪ್ರಾಥನೆಗೈದರುಮುರಾರಿ ಭಜಂತ್ರಿ ಸಂಗೀತ ರಸದೌತಣ ಉಣಿಸಿದರು. ರಾಣಿ ಹಳ್ಳಿ ಸ್ವಾಗತಿಸಿದರು. ರವಿ ಹಿರೇಮನಿ ವಂದಿಸಿದರು. ಇದೆ ಸಂದರ್ಭದಲ್ಲಿ ಅನೇಕ ಗಣ್ಯರನ್ನು ಸತ್ಕರಿಸಲಾಯುತು.

## ಆ. 27 ರಿಂದ ಕೊಪ್ಪಳದಲ್ಲಿ ವಿಶೇಷ ಚೇತನರ ಕ್ರೀಡಾ ತರಬೇತಿ ಕಾರ್ಯಾಗಾರ

**ಧೃತಿ ನ್ಯೂಸ್ ಸುದ್ದಿ**

ಕೊಪ್ಪಳ: ವಿಶೇಷ ಚೇತನ ಕ್ರೀಡಾಪಟುಗಳಲ್ಲಿ ಕ್ರೀಡಾಸಕ್ತಿ ಹಾಗೂ ಪ್ರತಿಭೆಯನ್ನು ಉತ್ತೇಜಿಸುವ ಮತ್ತು ಕ್ರೀಡಾ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಮೂರು ದಿನಗಳ ವಿಶೇಷ ಚೇತನರ ಕ್ರೀಡಾ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ಕೊಪ್ಪಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ವಿಠ್ಠಲ್ ಜಾಬಗೌಡರ ಅವರು ತಿಳಿಸಿದ್ದಾರೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಅಂಗವಿಕಲ ಕಲ್ಯಾಣ ಇಲಾಖೆ, ಕೊಪ್ಪಳ ಹಾಗೂ ಆಗು ನೀ ಅನಿಕೇತನ ಫೌಂಡೇಶನ್, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 27, 28 ಮತ್ತು 29ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಈ ಕಾರ್ಯಾಗಾರ ನಡೆಯಲಿದೆ. ಕಾರ್ಯಾಗಾರದಲ್ಲಿ ವಿಶೇಷ ಚೇತನ ಕ್ರೀಡಾಪಟುಗಳಿಗೆ ವಿವಿಧ ಕ್ರೀಡಾ ವಿಭಾಗಗಳಲ್ಲಿ ಮೂಲಭೂತ ತರಬೇತಿ, ದೈಹಿಕ ಕ್ಷಮತೆ ವೃದ್ಧಿ, ಕ್ರೀಡಾ ಕೌಶಲ್ಯಾಭಿವೃದ್ಧಿ ಹಾಗೂ ಸ್ಪರ್ಧಾತ್ಮಕ ಮನೋಭಾವ ಬೆಳೆಸುವ ಕುರಿತು ಪರಿಣಿತ ತರಬೇತುದಾರರಿಂದ ತರಬೇತಿ ನೀಡಲಾಗುತ್ತದೆ. ಅಂತರರಾಷ್ಟ್ರೀಯ ಮಟ್ಟದ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಭಾಗವಹಿಸಿ ಪದಕ ವಿಜೇತರಾದ ಕ್ರೀಡಾಪಟುಗಳು ಸಹ ತರಬೇತಿ ನೀಡಲು ಆಗಮಿಸಲಿದ್ದಾರೆ. ಈ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಲು ಆಸಕ್ತ ವಿಶೇಷ ಚೇತನ ಕ್ರೀಡಾಪಟುಗಳು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಗದಗ ರಸ್ತೆ, ಕೊಪ್ಪಳ ಕಚೇರಿಯನ್ನು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ 08539-230121 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದು ಪ್ರಕಟಣೆ ತಿಳಿಸಿದೆ.

ಈ ನಮ್ಮ ಧೃತಿ ನ್ಯೂಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.
ಮೊ: 7353595904

## ಆಗಸ್ಟ್ 27ರಂದು ಹೆಚ್.ಟಿ ಗ್ರಾಹಕರೊಂದಿಗೆ ಸಂವಾದ ಸಭೆ

**ಧೃತಿ ನ್ಯೂಸ್ ಸುದ್ದಿ**

ರಾಯಚೂರು: ರಾಯಚೂರು ಜಿಲ್ಲೆಯ ಎಲ್ಲಾ ತಾಲ್ಲೂಕಿನ ಜೆಸ್ಕಾಂ ಉಪ-ವಿಭಾಗಗಳಲ್ಲಿ ಹೆಚ್.ಟಿ ಗ್ರಾಹಕರೊಂದಿಗೆ ಸಂವಾದ ಸಭೆಯನ್ನು ಅಧೀಕ್ಷಕ ಅಭಿಯಂತರರು ಅವರ ಅಧ್ಯಕ್ಷತೆಯಲ್ಲಿ ಆಗಸ್ಟ್ 27ರ ಬೆಳಿಗ್ಗೆ 11ಗಂಟೆಗೆ ವೃತ್ತ ಕಚೇರಿಯಲ್ಲಿ ನಡೆಸಲು ನಿಗದಿಪಡಿಸಲಾಗಿದ್ದು, ಈ ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಹಾಜರಾಗಿ ಸಭೆಯ ಉಪಯೋಗವನ್ನು ಪಡೆಯಬೇಕೆಂದು ಜೆಸ್ಕಾಂ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಸಾವಿರ ಕೈಗಳಿಗೆ ಕೆಲಸ ನೀಡಿದರೂ ಕೂಲಿಕಾರರಿಗೆ ಸೌಲಭ್ಯ ಮರೀಚಿಕೆ ವಣಗೇರಿ ಕೆರೆಯಲ್ಲಿ ವಿಬಿಜಿ-ರಾಮ್ ಜಿ ಯೋಜನೆಯಡಿ ಪುನಶ್ಚೇತನ ಕಾಮಗಾರಿ

**ಧೃತಿ ನ್ಯೂಸ್ ಸುದ್ದಿ**

**ವರದಿ: ಅಮರೇಶ ತಾರಿವಾಳ**

ದೋಟಿಹಾಳ: ವಿಬಿಜಿ-ರಾಮ್ ಜಿ ಯೋಜನೆಯಡಿ ಕೆರೆ ಅಭಿವೃದ್ಧಿ ಕಾಮಗಾರಿ ಆರಂಭದಿಂದ ತಾಲೂಕಿನ ಗ್ರಾಮೀಣ ಭಾಗದ ಕೂಲಿ ಕಾರ್ಮಿಕರಿಗೆ ಕೆಲಸ ಸಿಕ್ಕಿದೆ. ಆದರೆ ಕೆಲಸ ಮಾಡುವ ಸ್ಥಳದಲ್ಲಿ ಕನಿಷ್ಠ ಸೌಲಭ್ಯ ಇಲ್ಲದಿರುವುದು ಕೂಲಿಕಾರರ ಸಂಕಷ್ಟ ಮತ್ತಷ್ಟು ಹೆಚ್ಚಿಸಿದೆ.

ಬಿಸಿಲಿನ ನಡುವೆ ದುಡಿಯುವ ಕೂಲಿ ಕಾರ್ಮಿಕರಿಗೆ ಕುಡಿವ ನೀರು, ನೆರಳು, ವಿಶ್ರಾಂತಿ ಸ್ಥಳ, ಮಕ್ಕಳ ಆರೈಕೆ, ಪ್ರಾಥಮಿಕ ಚಿಕಿತ್ಸೆಯಂತಹ ಅಗತ್ಯ ಸೌಲಭ್ಯ ಸಮರ್ಪಕವಾಗಿ ಕಲ್ಪಿಸಿಲ್ಲ ಎಂಬ ಆರೋಪ ಕೇಳಿಬಂದಿದೆ. ಹೌದು. ತಾಲೂಕಿನ ವಣಗೇರಿ ಗ್ರಾಮದ ಕೆರೆಯಲ್ಲಿ ವಿಬಿಜಿರಾಮ್ ಜಿ ಯೋಜನೆಯಡಿ ಕಾಮಗಾರಿ ನಡೆಯುತ್ತಿದ್ದು, ಕೇಸೂರು, ತಳುವಗೇರಿ, ಬಿಜಕಲ್ ಗ್ರಾಪಂ ವ್ಯಾಪ್ತಿಯ ಸಾವಿರಕ್ಕೂ ಅಧಿಕ ಕೂಲಿ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಗ್ರಾಮೀಣ ಕುಟುಂಬಗಳಿಗೆ ಕೆಲಸ ಸಿಕ್ಕಿರುವುದರಿಂದ ನೆಮ್ಮದಿ ಮೂಡಿದ್ದರೂ ಸ್ಥಳದಲ್ಲಿ ಸೌಲಭ್ಯಗಳ ಕೊರತೆ ಬೇಸರಕ್ಕೆ ಕಾರಣವಾಗಿದೆ.



ಅನುದಾನ ಬಾರದ ಕಾರಣದಿಂದ ಗ್ರಾಪಂನವರು ಕರವಸೂಲಾತಿಯ ಹಣದಲ್ಲಿ ಮೂಲ ಸೌಕರ್ಯ ವ್ಯವಸ್ಥೆ ಮಾಡಬೇಕಿದ್ದು, ಕೂಲಿಕಾರರಿಗೆ ನೀರು ಹಾಗೂ ನೆರಳಿನ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಸಂಬಂದಿಸಿದ ಪಿಡಿಒಗೆ ಸೂಚನೆ ನೀಡಲಾಗುವುದು.

**ನಿಂಗನಗೌಡ ಹಿರೇಹಾಳ**
ಸಹಾಯಕ ನಿರ್ದೇಶಕ ತಾಪಂ
ಕುಷ್ಟಗಿ

ವಣಗೇರಿ ಕೆರೆಯಲ್ಲಿ ಕೆಲಸ ಮಾಡುವ ಸ್ಥಳದಲ್ಲಿ ಕುಡಿವ ನೀರು, ವಿಶ್ರಾಂತಿ ಪಡೆಯಲು ನೆರಳಿನ ಜಾಗ ಇಲ್ಲ. ಬಿಸಿಲಿನಲ್ಲೇ ಕುಳಿತು ಊಟ ಮಾಡುವ ಪರಿಸ್ಥಿತಿ ಇದ್ದು ಮೂಲಸೌಲಭ್ಯ ಒದಗಿಸಿಕೊಟ್ಟರೆ ಕೂಲಿಕಾರರಿಗೆ ಅನೂಕೂಲವಾಗಲಿದೆ.

**ಸಂಗಮೇಶ ಮಡಿವಾಳರ**
ಕೂಲಿ ಕಾರ್ಮಿಕ

**ಸೌಲಭ್ಯ ಕಲ್ಪಿಸಿಕೊಡಿ**

ಸಾವಿರಕ್ಕೂ ಅಧಿಕ ಕೂಲಿಕಾರರು ಕೆಲಸ ಮಾಡುತ್ತಿರುವ ಸ್ಥಳದಲ್ಲಿ ಕನಿಷ್ಠ ಸೌಲಭ್ಯ ಕಲ್ಪಿಸದಿರುವುದು ಕೂಲಿಕಾರ-ರಿಗೆ ಬೇಸರ ತಂದಿದ್ದು, ಮೂಲಸೌಲಭ್ಯ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಅಧಿಕಾರಿ ವರ್ಗ ಕೆಲಸ ಮಾಡಬೇಕಿದೆ. ಕೂಲಿಕಾರರ ಸಂಖ್ಯೆಗೆ ಅನುಗುಣವಾಗಿ ಶುದ್ಧ ಕುಡಿವ ನೀರು, ನೆರಳಿನ ವ್ಯವಸ್ಥೆ, ವಿಶ್ರಾಂತಿ ಸ್ಥಳ, ಮಕ್ಕಳ ಆರೈಕೆ ಕೇಂದ್ರ ಹಾಗೂ ಪ್ರಾಥಮಿಕ ಚಿಕಿತ್ಸಾ ಸೌಲಭ್ಯ ಕಲ್ಪಿಸಿಕೊಡುವ ಮೂಲಕ ಕೂಲಿಕಾರರು ಸುರಕ್ಷಿತವಾಗಿ ಕೆಲಸ ಮಾಡುವ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿ ವರ್ಗ ಕೆಲಸ ಮಾಡಬೇಕಿದೆ. ಬಿಸಿಲಿನಲ್ಲಿ ಕೆಲಸ ಮಾಡುವವರಿಗೆ ತಂದ ನೀರು ಸಾಲದಿದ್ದರೆ ಮತ್ತೆ ನೀರಿಗಾಗಿ ಪರದಾಡಬೇಕಾದ ಸ್ಥಿತಿ ಎದುರಾಗಿದ್ದು, ಗ್ರಾಪಂನವರು ಕೆಲವೊಮ್ಮೆ ನೀರು ತಂದು ಕೊಟ್ಟರೂ ಅದು ಸಾಲುತ್ತಿಲ್ಲ.

ಕಾಮಗಾರಿ ಸ್ಥಳದಲ್ಲಿ ಸಮರ್ಪಕ ಕುಡಿವ ನೀರಿನ ವ್ಯವಸ್ಥೆ ಇಲ್ಲದಿರುವುದರಿಂದ ಕೂಲಿಕಾರರು ಮನೆ ಯಿಂದಲೇ ನೀರು ತೆಗೆದುಕೊಂಡು ಬರಬೇಕಾಗಿದೆ.

ವಿಶ್ರಾಂತಿಗೂ ನೆರಳಿಲ್ಲ: ಕೆರೆಯ ಕಾಮಗಾರಿ ಬಯಲು ಪ್ರದೇಶದಲ್ಲಿ ನಡೆಯುತ್ತಿರುವುದರಿಂದ ಬಿಸಿಲಿನ ತಾಪ ನೇರವಾಗಿ ಕೂಲಿಕಾರರ ಮೇಲೆ ಬೀಳುತ್ತಿದೆ


# ಭಾರಿ ಬೆಲೆ ಏರಿಕೆಯಿಂದ ಕಹಿಯಾದ ಸಕ್ಕರೆ-ಬೆಲ್ಲ



ಬೆಂಗಳೂರು: ಸಕ್ಕರೆ ಬೆಲೆ ಏರಿಕೆ ಬೆನ್ನಲ್ಲೇ ಇದೀಗ ಬೆಲ್ಲದ ಬೆಲೆಯೂ ದಾಖಲೆಯ ಮಟ್ಟಕ್ಕೆ ಏರಿಕೆಯಾಗಿದೆ. ಮಂಡ್ಯ ಎಪಿಎಂಸಿಯಲ್ಲಿ ಗುಣಮಟ್ಟದ ಅಚ್ಚುಬೆಲ್ಲ ಕ್ವಿಂಟಾಲ್‌ಗೆ ಗರಿಷ್ಠ 6,750 ರೂ.ಗಳಿಂದ 7 ಸಾವಿರ ರೂ.ವರೆಗೆ ಮಾರಾಟವಾಗುತ್ತಿದೆ.ಕಳೆದ ಕೆಲವು ದಿನಗಳಿಂದ ಸಕ್ಕರೆ ಬೆಲೆ ನಿರಂತರವಾಗಿ ಏರುತ್ತಲೇ ಇದ್ದು, ಚಿಲ್ಲರೆಯಾಗಿ ಕೆಜಿ ಸಕ್ಕರೆ 70 ರೂ.ಗೆ ಮಾರಾಟವಾಗುತ್ತಿದೆ. ಸಿಹಿಯಾದ ಸಕ್ಕರೆ ಗ್ರಾಹಕರಿಗೆ ಬೆಲೆ ಕೇಳುತ್ತಿದ್ದಂತೆ ಕಹಿಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಕೆಲವೆಡೆ ಟೀ, ಕಾಫಿ ಹಾಗೂ ಸಿಹಿತಿನಿಸುಗಳ ಬೆಲೆಯೂ ಏರಿಕೆಯಾಗಿದೆ. ಕಳೆದ 2-3 ದಿನಗಳಿಂದ ಮಳೆಯಾಗುತ್ತಿದ್ದು, ಮೋಡ ಕವಿದ ವಾತಾವರಣ ಇರುವುದರಿಂದ ಚುಮುಚುಮು ಚಳಿಗೆ ಟೀ, ಕಾಫಿ ಕುಡಿಯಲು ಹೋಟೆಲ್‌ಗೆ ಹೋದರೆ ಬೆಲೆ ನೋಡಿ ಶಾಕ್ ಆಗುವಂತಾಗಿದೆ. ಇತ್ತ ಬೆಲ್ಲದ ಚಹಾ ಕುಡಿಯೋಣ ಎಂದರೂ ಅದರ ಬೆಲೆಯೂ ಏರಿಕೆಯಾಗಿದೆ. ಮಂಡ್ಯ ಎಪಿಎಂಸಿಯಲ್ಲಿ ಈ ಹಿಂದೆ ಕ್ವಿಂಟಾಲ್ ಬೆಲ್ಲಕ್ಕೆ 4,700 ರೂ.ಗಳಿಂದ 5 ಸಾವಿರ ರೂ.ವರೆಗೆ ದರವಿತ್ತು. ಇದೀಗ ಸುಮಾರು 2 ಸಾವಿರ ರೂ. ಹೆಚ್ಚಾಗಿದ್ದು, ಒಂದೇ ಬಾರಿ ಇಷ್ಟು ಬೆಲೆ ಹೆಚ್ಚಾಗಿರುವುದು ಐತಿಹಾಸಿಕ ದಾಖಲೆ ಎಂದು ಮಾರಾಟಗಾರರು ತಿಳಿಸಿದ್ದಾರೆ.

**ಆಲೆಮನೆಗಳು ಕಣ್ಮರೆ:** ಇತ್ತೀಚಿನ ದಿನಗಳಲ್ಲಿ ಕೂಲಿಕಾರ್ಮಿಕರ ಕೊರತೆಯಿಂದಾಗಿ ಮಂಡ್ಯ, ಮೈಸೂರು, ಮಳವಳ್ಳಿ, ಮದ್ದೂರು ಸೇರಿದಂತೆ ಮತ್ತಿತರ ಕಡೆಗಳಲ್ಲಿ ನಡೆಯುತ್ತಿದ್ದ ಆಲೆಮನೆಗಳು ಮುಚ್ಚಿವೆ. ಇದರಿಂದ ಬೆಲ್ಲದ ಉತ್ಪಾದನೆ ಕುಂಠಿತವಾಗಿದೆ. ಶ್ರಾವಣ ಮಾಸ ಆರಂಭವಾಗಿದ್ದು, ಸಾಲುಸಾಲು ಹಬ್ಬಗಳು ಹಾಗೂ ಶುಭ ಸಮಾರಂಭಗಳು ಹೆಚ್ಚಾಗಿ ನಡೆಯುತ್ತಿದ್ದು, ಬೆಲ್ಲಕ್ಕೆ ಬೇಡಿಕೆ ಹೆಚ್ಚಾಗಿರುವುದೂ ಬೆಲೆ ಏರಿಕೆಗೆ ಕಾರಣವಾಗಿದೆ.ಮಾರುಕಟ್ಟೆಯಲ್ಲಿ ಸಕ್ಕರೆ ದರ ಕೆಜಿಗೆ 70 ರೂ. ಆಗಿರುವುದು ಬೆಲ್ಲದ ಉತ್ಪಾದನೆ ಮೇಲೂ ಪರಿಣಾಮ ಬೀರಿದೆ. ಮಂಡ್ಯದಿಂದ ಪ್ರತಿನಿತ್ಯ ಟನ್‌ಗಟ್ಟಲೆ ಬೆಲ್ಲ ಹೊರರಾಜ್ಯಗಳಿಗೆ ಸರಬರಾಜಾಗುತ್ತಿತ್ತು. ಕಳೆದ ಮೂರ್ನಾಲ್ಕು ದಿನಗಳಿಂದ ಆ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದೆ ಎಂದು ವರ್ತಕರು ತಿಳಿಸಿದ್ದಾರೆ.ಕಳೆದ ಹತ್ತು ವರ್ಷಗಳಿಗೆ ಹೋಲಿಸಿದರೆ ಇದೇ ಮೊದಲ ಬಾರಿಗೆ ಒಂದೇ ಬಾರಿಗೆ ಕೆಜಿಗೆ 20ರಿಂದ 25 ರೂ. ವರೆಗೆ ಏರಿಕೆ ಕಂಡಿದೆ. ಕಳೆದ ವಾರ ಕೆಜಿ ಬೆಲ್ಲ 45ರಿಂದ 50 ರೂ. ಗೆ ಮಾರಾಟವಾಗುತ್ತಿತ್ತು. ಇದೀಗ 68 ರೂ.ಗೆ ಮಾರಾಟವಾಗುತ್ತಿದೆ. ಎಪಿಎಂಸಿ ಮಾರುಕಟ್ಟೆಯಲ್ಲಿ ಉಂಡೆಬೆಲ್ಲಕ್ಕಿಂತ ಅಚ್ಚುಬೆಲ್ಲಕ್ಕೆ ಬೇಡಿಕೆ ಹೆಚ್ಚಾಗಿದೆ. ಕ್ವಿಂಟಾಲ್‌ಗೆ 4,500 ರೂ.ಗಳಿಂದ 6,300 ರೂ.ವರೆಗೆ ಮಾರಾಟವಾಗಿದೆ.ಒಟ್ಟಿನಲ್ಲಿ ಸಿಹಿ ನೀಡುವ ಬೆಲ್ಲ ಮತ್ತು ಸಕ್ಕರೆ ಎರಡರ ಬೆಲೆಯೂ ಏರಿಕೆಯಾಗುವ ಮೂಲಕ ಗ್ರಾಹಕರಿಗೆ ಕಹಿಯಾಗಿದೆ. ರಾಜ್ಯದಲ್ಲಿ ಇತ್ತೀಚೆಗೆ ಸಕ್ಕರೆ ಕಾಯಿಲೆ ಹೆಚ್ಚಾಗುತ್ತಿದ್ದು, ಬಹುತೇಕ ಜನರು ಸಕ್ಕರೆ ರಹಿತ ಕಾಫಿ, ಟೀ ಕುಡಿಯುತ್ತಿದ್ದಾರೆ. ಇದರಿಂದ ತುಸು ಬೇಡಿಕೆ ಕಡಿಮೆಯಾಗಿದೆ. ಎಲ್ಲರೂ ಸಕ್ಕರೆ, ಬೆಲ್ಲ ಬಳಸುವಂತಿದ್ದರೆ ಇನ್ನೂ ಬೆಲೆ ಏರಿಕೆಯಾಗುತ್ತಿತ್ತು ಎಂದು ಹಿರಿಯ ನಾಗರಿಕರೊಬ್ಬರು ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದಾರೆ.

# ಗೈಡ್ ಇಲ್ಲ, ದಾರಿ ಗೊತ್ತಿಲ್ಲ : ಎತ್ತಿನ ಭುಜ ಚಾರಣಿಗರ ಪರದಾಟ



ಚಿಕ್ಕಮಗಳೂರು: ಮೂಡಿಗೆರೆ ತಾಲೂಕಿನ ಪ್ರಸಿದ್ಧ ಎತ್ತಿನ ಭುಜ-ಕ್ಕೆ ಚಾರಣಕ್ಕೆ ಆಗಮಿಸಿದ್ದ ಪ್ರವಾಸಿಗರು ಮಾರ್ಗದರ್ಶಕರಿಲ್ಲದೆ ದಾರಿ ತಪ್ಪಿ ಅರ್ಧ ಹಾದಿಯಿಂದಲೇ ವಾಪಸ್ ಬಂದ ಘಟನೆ ನಡೆದಿದೆ.ವಾರಾಂತ್ಯದ ಹಿನ್ನೆಲೆಯಲ್ಲಿ ನೂರಾರು ಪ್ರವಾಸಿಗರು ಎತ್ತಿನ ಭುಜ ಚಾರಣಕ್ಕೆ ಆಗಮಿಸಿದ್ದರು. ಆನ್‌ಲೈನ್‌ನಲ್ಲಿ ಮುಂಗಡ ಬುಕ್ಕಿಂಗ್ ಮಾಡಿಕೊಂಡು ಬಂದಿದ್ದ ಪ್ರವಾಸಿಗರಿಗೆ ಸ್ಥಳದಲ್ಲಿ ಗೈಡ್‌ಗಳ ವ್ಯವಸ್ಥೆ ಇಲ್ಲದಿರುವುದು ಹಾಗೂ ಚಾರಣ ಮಾರ್ಗದಲ್ಲಿ ಬೃಹತ್ ಮರಗಳು ಬಿದ್ದಿರುವುದು ತೊಂದರೆ ಉಂಟುಮಾಡಿತು.

ಹಲವು ತಿಂಗಳಿನಿಂದ ಸ್ಥಗಿತಗೊಂಡಿದ್ದ ಚಾರಣವನ್ನು ಅರಣ್ಯ ಇಲಾಖೆ ಯಾವುದೇ ಪೂರ್ವಸಿದ್ಧತೆ ಇಲ್ಲದೆ ಪುನರಾರಂಭಿಸಿದೆ ಎಂಬ ಆರೋಪ ಕೇಳಿಬಂದಿದೆ. 5 ಕಿ.ಮೀ. ಚಾರಣಕ್ಕೆ 300 ರೂ. ಪ್ರವೇಶ ಶುಲ್ಕ ಹಾಗೂ ಗೈಡ್‌ಗೆ 75 ರೂ. ಶುಲ್ಕ ಪಡೆಯುತ್ತಿದ್ದರೂ, ಗೈಡ್‌ಗಳ ವ್ಯವಸ್ಥೆ ಮಾಡದಿರುವುದಕ್ಕೆ ಪ್ರವಾಸಿಗರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಿಂದ ಬಂದ ರಾಜೇಶ್ ಹಾಗೂ ಅವರ ತಂಡ ಆನ್‌ಲೈನ್‌ನಲ್ಲಿ ಬುಕ್ಕಿಂಗ್ ಮಾಡಿಕೊಂಡು ಚಾರಣಕ್ಕೆ ತೆರಳಿತ್ತು. ದಟ್ಟ ಕಾಡಿನ ನಡುವೆ ದಾರಿ ತಪ್ಪಿದ ಹಿನ್ನೆಲೆಯಲ್ಲಿ ಅರ್ಧ ಹಾದಿಯಿಂದಲೇ ವಾಪಸ್ ಬಂದಿದ್ದಾರೆ. ಚಾರಣ ಮಾರ್ಗದಲ್ಲಿ ಮರಗಳು ಬಿದ್ದಿದ್ದರಿಂದ ಮುಂದೆ ಸಾಗಲು ಸಾಧ್ಯವಾಗಲಿಲ್ಲ ಎಂದು ಅವರು ತಿಳಿಸಿದ್ದಾರೆ.

**ಸಮಸ್ಯೆ ಪರಿಹರಿಸಲಾಗಿದೆ: ಅರಣ್ಯ ಇಲಾಖೆ**

ಈ ಕುರಿತು ಉಪ ಅರಣ್ಯ ಸಂರಕ್ಷಣಾಧಿಕಾರಿ ಬೋರಯ್ಯ ಮಾತನಾಡಿ, ಆನ್‌ಲೈನ್ ಬುಕ್ಕಿಂಗ್ ಆರಂಭಿಸಿದ ಬಳಿಕ ಮೊದಲ ಬ್ಯಾಚ್‌ನಲ್ಲಿ ಸ್ವಲ್ಪ ಸಮಸ್ಯೆ ಉಂಟಾಗಿತ್ತು. ತಕ್ಷಣ ಸ್ಥಳ ಪರಿಶೀಲಿಸಿ ಸಮಸ್ಯೆ ಬಗೆಹರಿಸಲಾಗಿದೆ. ಕೆಲವು ಕಡೆ ಮರಗಳು ಬಿದ್ದಿದ್ದು, ಅವುಗಳ ಪಕ್ಕದಲ್ಲೇ ಪರ್ಯಾಯ ಮಾರ್ಗ ನಿರ್ಮಿಸಲಾಗಿದೆ. ಶನಿವಾರ ಒಂದೇ ದಿನ 100ಕ್ಕೂ ಹೆಚ್ಚು ಪ್ರವಾಸಿಗರು ಯಾವುದೇ ಸಮಸ್ಯೆಯಿಲ್ಲದೆ ಚಾರಣ ಮುಗಿಸಿದ್ದಾರೆ ಎಂದು ತಿಳಿಸಿದ್ದಾರೆ. ಮೂವಿ ಮತ್ತು ಟಿವಿ ಶೋಗಳನ್ನು ಸ್ಟ್ರೀಮ್ ಮಾಡುವುದು ನಗರದ ಸ್ಥಳೀಯ ಮಾರ್ಗದರ್ಶಿಗಳನ್ನು ಬಳಸುವುದು ಆದರೆ, ಪ್ರವಾಸಿಗರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಚಾರಣಕ್ಕೆ ಬರುವವರೊಂದಿಗೆ ಕಡ್ಡಾಯವಾಗಿ ಗೈಡ್‌ಗಳನ್ನು ಕಳುಹಿಸುವುದು ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು ಎಂದು ಪ್ರವಾಸಿಗರು ಆಗ್ರಹಿಸಿದ್ದಾರೆ.

ಈ ನಮ್ಮ ಧೃತಿ ನ್ಯೂಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.
ಮೊ: 7353595904

# ರಜಾದಿನವೂ ಬೆಸ್ಕಾಂ ಸ್ವಚ್ಛತಾ ಕಾರ್ಯ, ಶೇ.80ರಷ್ಟು ತೆರವು ಪೂರ್ಣ

ಬೆಂಗಳೂರು: ನಗರದ ಪಾದಚಾರಿ ಮಾರ್ಗಗಳಲ್ಲಿ ಸ್ಥಗಿತಗೊಂಡಿರುವ ಹಾಗೂ ಬಳಕೆಯಲ್ಲಿಲ್ಲದ ವಿದ್ಯುತ್ ಪರಿಕರಗಳನ್ನು ತೆರವುಗೊಳಿಸುವ ಜತೆಗೆ ಸ್ವಚ್ಛತಾ ಕಾರ್ಯವನ್ನು ಬೆಸ್ಕಾಂ ಭಾನುವಾರವೂ ಮುಂದುವರಿಸಿತು. ಕ್ಲೀನ್ ಅಪ್ ಬೆಂಗಳೂರು ಅಭಿಯಾನದ ಭಾಗವಾಗಿ ನಗರದ ವಿವಿಧೆಡೆ ಬೆಸ್ಕಾಂ ಅಧಿಕಾರಿಗಳು ಹಾಗೂ ಸಿಬ್ಬಂದಿ ದಿನವಿಡೀ ಕಾರ್ಯಾಚರಣೆ ನಡೆಸಿದರು.

ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ. ಎನ್. ಶಿವಶಂಕರ ಅವರ ನೇತೃತ್ವದಲ್ಲಿ ಶನಿವಾರ ತಡರಾತ್ರಿಯಿಂದ ಆರಂಭಗೊಂಡಿದ್ದ ಕಾರ್ಯಾಚರಣೆ ಭಾನುವಾರ ಬೆಳಿಗ್ಗೆ 6ರಿಂದ ಮತ್ತೆ ಚುರುಕುಗೊಂಡಿತು. ಮಲ್ಲೇಶ್ವರ, ರಾಜಾಜಿನಗರ, ಹೆಬ್ಬಾಳ, ರಾಜರಾಜೇಶ್ವರಿ ನಗರ, ಕೆಎಚ್‌ಬಿ ಕಾಲೊನಿ ಮುಖ್ಯರಸ್ತೆ, ಕೋರಮಂಗಲ, ನಾಗವಾರ, ಬಂಗಾರಪ್ಪನಗರ, ಥಣಿಸಂದ್ರ, ಕೊತ್ತನೂರು, ಸುಂಕದಕಟ್ಟೆ, ನಾಗರಬಾವಿ, ಕೊಮಘಟ್ಟ, ಉತ್ತರಹಳ್ಳಿ, ಕತ್ರಿಗುಪ್ಪೆ, ವೈಟ್‌ಫೀಲ್ಡ್ ಹಾಗೂ ಮಹದೇವಪುರ ಸೇರಿದಂತೆ ಹಲವು ಪ್ರದೇಶಗಳಲ್ಲಿ ಅನುಪಯುಕ್ತ ವಿದ್ಯುತ್ ಪರಿಕರಗಳ ತೆರವು ಹಾಗೂ ಸ್ವಚ್ಛತಾ ಕಾರ್ಯ ನಡೆಯಿತು. ಜಿಒಎಸ್ ರಾಡ್‌ಗಳನ್ನು ನೆಲಮಟ್ಟದಿಂದ ಏಳು ಅಡಿ ಎತ್ತರಿಸುವ



ಕಾರ್ಯವನ್ನೂ ಕೈಗೊಳ್ಳಲಾಯಿತು.

**ಶೇ.80ರಷ್ಟು ಕಾರ್ಯ ಪೂರ್ಣ**

ಕ್ಲೀನ್ ಅಪ್ ಬೆಂಗಳೂರು ಅಭಿಯಾನದಡಿ ಬೆಸ್ಕಾಂ ಕೈಗೊಂಡಿರುವ ತೆರವು ಹಾಗೂ ಸ್ವಚ್ಛತಾ ಕಾರ್ಯ ಶೇ.80ರಷ್ಟು ಪೂರ್ಣಗೊಂಡಿದೆ ಎಂದು ಡಾ. ಎನ್. ಶಿವಶಂಕರ ತಿಳಿಸಿದರು.ಪಾದಚಾರಿ ಮಾರ್ಗಗಳಲ್ಲಿದ್ದ ಸ್ಥಗಿತಗೊಂಡ ಅಥ-'ವಾ ಬಳಕೆಯಲ್ಲಿಲ್ಲದ ವಿದ್ಯುತ್ ಪರಿವರ್ತಕ ಕೇಂದ್ರಗಳು ಸೇರಿದಂತೆ ಇತರೆ ಅನುಪಯುಕ್ತ ಪರಿಕರಗಳ ತೆರವು ಕಾರ್ಯವನ್ನು ಬೆಸ್ಕಾಂ ಮೂರು ತಿಂಗಳ ಹಿಂದೆಯೇ ಆರಂಭಿಸಿತ್ತು. ಆಗಸ್ಟ್ 1ರಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವ ಹಾಗೂ ಇಂಧನ ಸಚಿವರು ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವರ ಮಾರ್ಗದರ್ಶನದಲ್ಲಿ ಇದನ್ನು ಆಂದೋಲನದ ರೂಪದಲ್ಲಿ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ಲೈನ್‌ಮನ್‌ಗಳು ಪ್ರತಿ ವಾರ ಅಥವಾ 15 ದಿನಕ್ಕೊಮ್ಮೆ ಪರಿವರ್ತಕಗಳ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸಲಿದ್ದಾರೆ ಎಂದರು.ಆ. 1ರಿಂದ 23ರವರೆಗೆ ಬೆಸ್ಕಾಂ ಕೈಗೊಂಡ ಕಾರ್ಯಾಚರಣೆಯಲ್ಲಿ 1,535 ವಿದ್ಯುತ್ ಕಂಬಗಳು, ಆರು ಟ್ರಾನ್ಸ್‌ಫಾರ್ಮರ್ ಕೇಂದ್ರಗಳು ಹಾಗೂ ಒಂಬತ್ತು ಇತರೆ ಅನುಪಯುಕ್ತ ಮೂಲಸೌಕರ್ಯಗಳನ್ನು ತೆರವುಗೊಳಿಸಲಾಗಿದೆ. 1,758 ಜಿಎಸ್ ಆಪರೇಟಿಂಗ್ ರಾಡ್‌ಗಳನ್ನು ಮಾರ್ಪಡಿಸಲಾಗಿದೆ. ಇದರೊಂದಿಗೆ 4,836 ಡಿಟಿಸಿ ಯಾರ್ಡ್‌ಗಳು, 1,368 ಆರ್‌ಎಂಒ-ಯು ಯಾರ್ಡ್‌ಗಳು ಹಾಗೂ 1,207 ಸ್ಪನ್ ಪೋಲ್/ಡಿಪಿ ಯಾರ್ಡ್‌ಗಳ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಗಿದೆ. 151 ಫೀಡರ್ ಪಿಲ್ಲರ್ ಬಾಕ್ಸ್‌ಗಳ ರಿವೈರಿಂಗ್ ಮತ್ತು ಯಾರ್ಡ್ ಸ್ವಚ್ಛತಾ ಕಾಮಗಾರಿ ಹಾಗೂ 401 ಕಂಬಗಳ ರಿವೈರಿಂಗ್ ಮತ್ತು ಯಾರ್ಡ್ ಸ್ವಚ್ಛತಾ ಕಾಮಗಾರಿಯನ್ನೂ ನಡೆಸಲಾಗಿದೆ. ಸ್ವಚ್ಛ ಮತ್ತು ಸುರಕ್ಷಿತ ಬೆಂಗಳೂರಿನ ಪರಿಕಲ್ಪನೆಯನ್ನು ಸಾಕಾರಗೊಳಿಸುವಲ್ಲಿ ಜಿಬಿಎಗೆ ಬೆಸ್ಕಾಂ ಎಲ್ಲ ರೀತಿಯ ಸಹಕಾರ ನೀಡುತ್ತಿದೆ. ರಜಾದಿನವೂ ಲೈನ್‌ಮನ್‌ಗಳು, ಅಧಿಕಾರಿಗಳು ಮತ್ತು ಸಿಬ್ಬಂದಿ ಅನುಪಯುಕ್ತ ಪರಿಕರಗಳ ತೆರವು ಹಾಗೂ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಂಡಿರುವುದು ಶ್ಲಾಘನೀಯ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿದ್ದ ಕ್ಲೀನ್ ಅಪ್ ಬೆಂಗಳೂರು ತಿಂಗಳ ಅಭಿಯಾನದ ಭಾಗವಾಗಿ ಆಗಸ್ಟ್ 1ರಂದು ಸಚಿವ ಕೆ.ಜೆ. ಜಾರ್ಜ್ ಅವರು ಅಭಿಯಾನಕ್ಕೆ ಚಾಲನೆ ನೀಡಿದ್ದರು.

# 24,315 ಬಿಪಿಎಲ್ ಕಾರ್ಡ್ ಫಲಾನುಭವಿಗಳು ಸಂದೇಹಾಸ್ಪದ : ಜಿ.ಪರಮೇಶ್ವರ್

ಬೆಂಗಳೂರು:ರಾಜ್ಯದಲ್ಲಿ 24,315 ಬಿಪಿಎಲ್ ಕಾರ್ಡ್ ಫಲಾನುಭವಿಗಳನ್ನು ಸಂದೇಹಾಸ್ಪದ ಎಂದು ಗುರುತಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.ವಿಧಾನಸಭೆಯ ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿ ಶಾಸಕರು ಸಭಾಧ್ಯಕ್ಷರ ಪೀಠದ ಮುಂದಿನ ಬಾವಿಗಿಳಿದು ಧರಣಿ ನಡೆಸಿದ ಹಿನ್ನೆಲೆಯಲ್ಲಿ ವಿರೋಧ ಪಕ್ಷದ ಶಾಸಕರು ಪ್ರಶ್ನೋತ್ತರ ಕಲಾಪದಲ್ಲಿ ಭಾಗವಹಿಸಲಿಲ್ಲ. ಆದರೂ ಸಂಬಂಧಿಸಿದ ಪ್ರಶ್ನೆಗಳಿಗೆ ಸರ್ಕಾರದ ಪರವಾಗಿ ಉತ್ತರಗಳನ್ನು ಮಂಡಿಸಲಾಯಿತು.

ರಾಜಾಜಿನಗರ ಶಾಸಕ ಎಸ್. ಸುರೇಶ್ ಕುಮಾರ್ ಅವರ ಪ್ರಶ್ನೆಗೆ ಉತ್ತ-ರಿಸಿದ ಉಪಮುಖ್ಯಮಂತ್ರಿಯವರು, 2026ರ ಜುಲೈ ವೇಳೆಗೆ 5,607 ಫಲಾನುಭವಿಗಳಿಗೆ ಮಾಸಿಕ ಪಿಂಚಣಿ ಪಾವತಿಸಲಾಗಿದೆ ಎಂದು ವಿವರಿಸಿದರು. ಕುಟುಂಬದ ಆದಾಯದ ಮಿತಿಯನ್ನು 32 ಸಾವಿರ ರೂ.ಗೆ ಹೆಚ್ಚಿಸುವ ಪ್ರಸ್ತಾವನೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ ಎಂದು ತಿಳಿಸಿದರು.

ಸಂದೇಹಾಸ್ಪದ ಪ್ರಕರಣಗಳ ಕು-ರಿತು ಗ್ರಾಮ ಲೆಕ್ಕಾಧಿಕಾರಿ ಹಂತದಲ್ಲಿ 23,671 ಪ್ರಕರಣಗಳಲ್ಲಿ ಕ್ರಮ ಕೈಗೊಳ್ಳಲಾಗಿದೆ. ಈ ಪೈಕಿ 3,240 ಪ್ರಕರಣಗಳನ್ನು ಮುಂದುವ-ರಿಸಲಾಗಿದ್ದು, 20,431 ಪ್ರಕರಣಗಳಲ್ಲಿ ಸೇವೆ ಸ್ಥಗಿತಗೊಳಿಸಲಾಗಿದೆ. ಅಲ್ಲದೆ, 3,816 ಪ್ರಕರಣಗಳಲ್ಲಿ ಫಲಾನುಭವಿಗಳು ಲಭ್ಯವಿಲ್ಲ ಎಂದು ತಿಳಿಸಿದರು. ಇನ್ನು 14,493 ಫಲಾನುಭವಿಗಳು ಅಗತ್ಯ ದಾಖಲೆಗಳನ್ನು ಸಲ್ಲಿಸಲು ಸಿದ್ಧ-ರಿಲ್ಲ. 595 ಫಲಾನುಭವಿಗಳು ಆದಾಯ ಪ್ರಮಾಣಪತ್ರವನ್ನು ಒದಗಿಸಿಲ್ಲ ಎಂದು ವಿವರಿಸಿದರು. ತಹಸೀಲ್ದಾರ್ ಹಂತದಲ್ಲಿ 2,367 ಪ್ರಕರಣಗಳನ್ನು ಮುಂದುವ-ರಿಸಲಾಗಿದ್ದು, 325 ಪ್ರಕರಣಗಳಲ್ಲಿ ಸೌಲಭ್ಯವನ್ನು ರದ್ದುಗೊಳಿಸಲಾಗಿದೆ. ಒಟ್ಟು



21,623 ಅರ್ಜಿಗಳು ಬಾಕಿ ಉಳಿದಿವೆ ಎಂದು ಉಪಮುಖ್ಯಮಂತ್ರಿ ಮಾಹಿತಿ ನೀಡಿದರು.

ಅರ್ಹತಾ ಮಾನದಂಡಗಳನ್ನು ಹೊಂದದೆ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಕುರಿತು ದೂರುಗಳು ಬಂದ ಹಿನ್ನೆಲೆಯಲ್ಲಿ, ಕುಟುಂಬ ದತ್ತಾಂಶದಿಂದ ಪಡೆದ ಮಾಹಿತಿಯ ಆದ-ಾರದ ಮೇಲೆ ಆದಾಯ ಮಿತಿ ಸೇರಿದಂತೆ ಇತರೆ ಅರ್ಹತಾ ಮಾನದಂಡಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಡಾ. ಜಿ. ಪರಮೇಶ್ವರ್ ತಿಳಿಸಿದರು.

# ಕರಡು ಮತದಾರರ ಪಟ್ಟಿ ಪ್ರಕಟಿಸಿದ ಚುನಾವಣಾ ಆಯೋಗ

ಬೆಂಗಳೂರು: ರಾಜ್ಯದಲ್ಲಿ ನಡೆದ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಗೆ ಸಂಬಂಧಿಸಿದಂತೆ 4,46,35,899 ಮತದಾರರ ಕರಡು ಪಟ್ಟಿಯನ್ನು ಚುನಾವಣಾ ಆಯೋಗ ಇಂದು ಪ್ರಕಟಿಸಿದೆ.ಈ ಕುರಿತು ಮುಖ್ಯ ಚುನಾವಣಾಧಿಕಾರಿ ಅನ್ಬು ಕುಮಾರ್ ಅವರು ಮಧ್ಯಾಹ್ನ 3 ಗಂಟೆಗೆ ಸುದ್ದಿಗೋಷ್ಠಿ ನಡೆಸಿ ಅಧಿಕೃತ ಮಾಹಿತಿ ನೀಡಲಿದ್ದಾರೆ. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಒಟ್ಟು 1,79,64,15 ಮತದಾರರನ್ನು ಎಎಸ್‌ಡಿ (ಂಖಆ) ಪಟ್ಟಿಗೆ ಸೇರ್ಪಡೆ ಮಾಡಲಾಗಿದೆ ಎಂದು ತಿಳಿದುಬಂದಿದೆ.

ಇದೇ ವೇಳೆ, ಎನ್ಯೂಮರೇಷನ್ ಫಾರಂನಲ್ಲಿ ಸಲ್ಲಿಸಿರುವ ಮಾಹಿತಿ ಹಾಗೂ 2002ರ ಮತದಾರರ ಪಟ್ಟಿಯಲ್ಲಿನ ಮಾಹಿತಿಯಲ್ಲಿ ವ್ಯತ್ಯಾಸ ಕಂಡುಬಂದಿರುವ ಹಿನ್ನೆಲೆಯಲ್ಲಿ 43,80,740 ಮತದಾರರಿಗೆ ಇಂದಿನಿಂದ ನೋಟಿಸ್ ಜಾರಿ ಮಾಡುವ ಪ್ರಕ್ರಿಯೆ ಆರಂಭವಾಗಿದೆ. ಮತದಾರರ ಮಾಹಿತಿ ಪರಿಶೀಲನೆಗಾಗಿ ಇಂದಿನಿಂದ ಅಕ್ಟೋಬರ್ 22ರವರೆಗೆ ಒಟ್ಟು 58 ದಿನಗಳ



ಕಾಲ ನೋಟಿಸ್ ಜಾರಿ ಹಾಗೂ ಮತದಾರ-ರಿಂದ ಪ್ರತಿಕ್ರಿಯೆ ಪಡೆಯುವ ಪ್ರಕ್ರಿಯೆ ನಡೆಯಲಿದೆ. ಸಂಬಂಧಿಸಿದ ಮತದಾರರು ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಚುನಾವಣಾ ಆಯೋಗ ಸೂಚಿಸಲಿದೆ.

ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಪ್ರಕಟಿಸಲಾದ 4,46,35,899 ಮತದಾರರ ಪೈಕಿ 43,80,740 ಮಂದಿಯ ಮಾಹಿತಿಯಲ್ಲಿ ವ್ಯತ್ಯಾಸ ಅಥವಾ ಮ್ಯಾಪಿಂಗ್ ಸಮಸ್ಯೆ ಕಂಡುಬಂದಿದೆ. ಈ ಪೈಕಿ 20,35,312 ಮತದಾರರ ವೈಯಕ್ತಿಕ ಮಾಹಿತಿಯಲ್ಲಿ ವ್ಯತ್ಯಾಸ ಕಂಡುಬಂದಿದ್ದು, ಉಳಿದ 23,45,428 ಮತದಾರರ ಮ್ಯಾಪಿಂಗ್‌ನಲ್ಲಿ ತಪ್ಪು ಕಂಡುಬಂದಿದೆ ಎಂದು ತಿಳಿದುಬಂದಿದೆ.

**ಬೆಂಗಳೂರಿಗರಿಗೇ ಅತಿ ಹೆಚ್ಚು ನೋಟಿಸ್**

ರಾಜ್ಯದಲ್ಲೇ ಬೆಂಗಳೂರು ನಗರದಲ್ಲಿ ಅತಿ ಹೆಚ್ಚು ಮತದಾರರಿಗೆ ನೋಟಿಸ್ ಜಾರಿಯಾಗಲಿದೆ. ಬೆಂಗಳೂರಿನ ನಾಲ್ಕು ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಒಟ್ಟು 24,05,990 ಮತದಾರರಿಗೆ ದಾಖಲೆ ಸಲ್ಲಿಸುವಂತೆ ನೋಟಿಸ್ ನೀಡಲು ಚುನಾವಣಾ ಆಯೋಗ ಮುಂದಾಗಿದೆ. ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಲ್ಲಿ 6,13,003, ಬೆಂಗಳೂರು ಕೇಂದ್ರದಲ್ಲಿ 4,29,364, ಬೆಂಗಳೂರು ನಗರದಲ್ಲಿ 9,45,998 ಹಾಗೂ ಬೆಂಗಳೂರು ದಕ್ಷಿಣದಲ್ಲಿ 4,17,625 ಮತದಾರರಿಗೆ ನೋಟಿಸ್ ನೀಡಲಾಗುತ್ತಿದೆ. ಒಟ್ಟಾರೆ ಬೆಂಗಳೂರಿನ ನಾಲ್ಕು ಕ್ಷೇತ್ರಗಳಲ್ಲಿ 24,05,990 ಮತದಾರರು ನೋಟಿಸ್ ಪಡೆಯಲಿದ್ದಾರೆ.

ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆಯ ಮುಂದಿನ ಹಂತವಾಗಿ ಕರಡು ಮತದಾರರ ಪಟ್ಟಿ ಪ್ರಕಟವಾಗಿರುವ ಹಿನ್ನೆಲೆಯಲ್ಲಿ ಮತದಾರರು ಪಟ್ಟಿಯಲ್ಲಿ ತಮ್ಮ ಹೆಸರು, ವಿಳಾಸ ಹಾಗೂ ಇತರೆ ವಿವರಗಳನ್ನು ಪರಿಶೀಲಿಸಿಕೊಳ್ಳುವುದು ಮಹತ್ವದ್ದಾಗಿದೆ. ಮಾಹಿತಿ ವ್ಯತ್ಯಾಸ ಕಂಡುಬಂದಿರುವ ಮತದಾರರಿಗೆ ನೋಟಿಸ್ ಮೂಲಕ ದಾಖಲೆಗಳನ್ನು ಸಲ್ಲಿಸಿ ವಿವರಗಳನ್ನು ಸರಿಪಡಿಸಿಕೊಳ್ಳಲು ಅವಕಾಶ ನೀಡಲಾಗುತ್ತದೆ.

# ನಕಲಿ ಔಷಧಿ ದಂಧೆ : ಕೆಲ ಮೆಡಿಕಲ್ ಸ್ಟೋರ್‌ಗಳಿಗೆ ನೋಟೀಸ್ ಜಾರಿ

ಬೆಂಗಳೂರು: ನಕಲಿ ಔಷಧ ದಂಧೆ ಪ್ರಕರಣದ ತನಿಖೆಯನ್ನು ಚುರುಕುಗೊಳಿಸಿರುವ ಎಸ್‌ಐಟಿ ಅಧಿಕಾರಿಗಳು ಆರೋಪಿಗಳಿಂದ ಔಷಧಿ ಪಡೆದಿರುವ ಮೆಡಿಕಲ್ ಸ್ಟೋರ್‌ನ ಮಾಲೀಕರುಗಳಿಗೆ ನೋಟಿಸ್ ಜಾರಿ ಮಾಡಿದ್ದಾರೆ. ನಗರದ ಹೊರವಲಯದ ಬೆಂಗಳೂರು ದಕ್ಷಿಣ ತಾಲ್ಲೂಕಿನ ಸಿ.ಕೆ ತಾಂಡ್ಯದ ಫಾರ್ಮ್‌ಹೌಸ್‌ನಲ್ಲಿ ನಡೆಯುತ್ತಿದ್ದ ನಕಲಿ ಔಷಧಗಳ ದಂಧೆ ಬಯಲಾದ ಬೆನ್ನಲ್ಲೇ ಈ ಕ್ರಮ ಕೈಗೊಳ್ಳಲಾಗಿದೆ.

ಎಸ್‌ಐಟಿ ರಚನೆಯಾದ ನಂತರ ಸಭೆಗಳನ್ನು ನಡೆಸಿದ ಅಧಿಕಾ-ರಿಗಳು ಈ ದಂಧೆಯ ಆರೋಪಿಗಳಿಂದ ಔಷಧಿ ಖರೀದಿ ಮಾಡಿರುವ ಮೆಡಿಕಲ್ ಸ್ಟೋರ್‌ನ ಮಾಲೀಕರುಗಳನ್ನು ಪತ್ತೆ ಮಾಡಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದಾರೆ. ನಗರದ ಚಾಮರಾಜಪೇಟೆ ಮತ್ತು ಕಮರ್ಷಿಲ್‌ಸ್ಟ್ರೀಟ್‌ನ ಕೆಲವು ಮೆಡಿಕಲ್ ಸ್ಟೋರ್‌ಗಳ ಮೇಲೆ ಎಸ್‌ಐಟಿ ಅಧಿಕಾ-ರಿಗಳು ದಾಳಿ ನಡೆಸಿ ಕೆಲವು ಔಷಧಿಗಳನ್ನು ವಶಕ್ಕೆ ಪಡೆದುಕಕೆಲವು ಮೆಡಿಕಲ್ ಸ್ಟೋರ್ ಮಾಲೀಕರು ಈ ಆರೋಪಿಗಳಿಂದ ಎಷ್ಟು ವರ್ಷದಿಂದ ನಕಲಿ ಔಷಧಿಗಳನ್ನು ಖರೀದಿಸುತ್ತಿದ್ದರು. ಯಾವ ,ಯಾವ ಮಾದರಿಯ ಔಷಧಿಗಳನ್ನು ಎಷ್ಟು ,ಎಷ್ಟು ಬೆಲೆಗೆ ಕೊಂಡುಕೊಳ್ಳುತ್ತಿದ್ದರು ಎಂಬ ಮಾಹಿತಿಯನ್ನು ಸಹ ಎಸ್‌ಐಟಿ ಅಧಿಕಾರಿಗಳು ಕಲೆ ಹಾಕುತ್ತಿದ್ದಾರೆ. ಫಾರ್ಮ್‌ಹೌಸ್ ಮೇಲೆ ದಾಳಿ ಮಾಡಿದ ಸಂದರ್ಭದಲ್ಲಿ ತಾವರೆಕೆರೆ ಠಾಣೆ ಪೊಲೀಸರು ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ.ಪ್ರಮುಖ ಆರೋಪಿ ಪ್ರಶಾಂತ್ ವಿದೇಶದಲ್ಲಿ ತಲೆ ಮರೆಸಿಕೊಂಡಿದ್ದಾನೆ ಎಂಬ ಮಾಹಿತಿ ಹಿನ್ನಲೆಯಲ್ಲಿ ಎಸ್‌ಐಟಿ ಅಧಿಕಾ-ರಿಗಳು ಅವರ ಪತ್ನಿಯನ್ನು ವಿಚಾರಣೆ ಮಾಡಿದಾಗ ವಿದೇಶದ ವಿಮಾನ ನಿಲ್ದಾಣದ ಕಸ್ಟಮ್ಸ್ ಅಧಿಕಾರಿಗಳು ಬಂಧಿಸಿರುವುದು



ತಿಳಿದು ಬಂದಿದೆ. ಅಜರ್‌ಬೈಜಾನ್ ರಾಷ್ಟ್ರದಿಂದ ಕಡಿಮೆ ಬೆಲೆಯ ಔಷಧಿಗಳನ್ನು ಕರ್ನಾಟಕಕ್ಕೆ ತರುವಾಗ ಅಲ್ಲಿನ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ಅಧಿಕಾರಿಗಳು ತಪಾಸಣೆ ನಡೆಸಿದಾಗ ಪ್ರಶಾಂತ್ ಹಾಗೂ ಆತನ ಇಬ್ಬರು ಸಹಚರರು ಸಿಕ್ಕಿಬಿದ್ದಿದ್ದಾರೆ. ಈ ಮಾಹಿತಿ ಆಧಾರದ ಮೇಲೆ ಎಸ್‌ಐಟಿ ಅಧಿಕಾರಿಗಳು ಪ್ರಶಾಂತನನ್ನು ವಶಕ್ಕೆ ಪಡೆಯಲು ಇಂಟರ್‌ಪೋಲ್ ನೆರವು ಪಡೆಯಲಿದ್ದಾರೆ. ಈ ಬಗ್ಗೆ ಪ್ರಕ್ರಿಯೆಗಳು ನಡೆಯುತ್ತಿವೆ.

ಗೃಹ ಕೃತ್ಯಗಳ ನಿರ್ವಹಣೆ

# ಬದುಕಿನ ಮೂಲಭೂತ ಕಲಿಕೆ ಹಾಗೂ ಕಾನೂನು ಮಾನ್ಯತೆ

ಇತ್ತೀಚಿಗೆ ಮುಖ ಪುಸ್ತಕದಲ್ಲಿ ಒಂದು ಜಾಹೀರಾತು ನೋಡಿದೆ. ಪುಟ್ಟ ವಯಸ್ಸಿನ ಇಬ್ಬರು ಮಕ್ಕಳು ತಮ್ಮ ಮನೆಯ ಅಡುಗೆ ಕೋಣೆಯಲ್ಲಿ ಅಮ್ಮನ ಮಾರ್ಗದರ್ಶನದಲ್ಲಿ ಅಡುಗೆ ತಯಾರಿಸುತ್ತಿದ್ದರು. ಇದನ್ನು ನೋಡಿದ ಅಜ್ಜಿ ಅರೆ ಮಕ್ಕಳು ಅಮ್ಮನಿಗೆ ಸಹಾಯ ಮಾಡುವಷ್ಟು ದೊಡ್ಡವರಾದರೆ! ಎಂದು ಆಶ್ಚರ್ಯ ವ್ಯಕ್ತಪಡಿಸಿದರು.

ಕೂಡಲೇ ಬಾಯಿಯ ಮೇಲೆ ಬೆರಳಿಟ್ಟ ಮಗಳು ಅಮ್ಮ.. ಪ್ಲೀಸ್ ಹಾಗೆಲ್ಲ ಹೇಳಬೇಡ ಮಕ್ಕಳು ಮನೆಯ ಕೆಲಸದಲ್ಲಿ ಪಾಲ್ಗೊಳ್ಳುವುದು ಅವರು ನಮಗೆ ಮಾಡುವ ಸಹಾಯವಲ್ಲ, ಬದಲಾಗಿ ಅದು ಅವರ ಜೀವನದಲ್ಲಿ ಅತ್ಯವಶ್ಯಕವಾಗಿ ಕಲಿಯಲೇಬೇಕಾದ ಒಂದು ಕೌಶಲ ಸಹಾಯ ಮಾಡುವ ಮೂಲಕ ತಾವು ಮತ್ತೊಬ್ಬರಿಗೆ ಮಹದುಪಕಾರ ಮಾಡುತ್ತಿದ್ದೇವೆ ಎಂಬ ಭಾವ ಮಕ್ಕಳಲ್ಲಿ ಮೂಡುವುದು ಬೇಡ ಎಂದು ತಾಯಿಗೆ ಹೇಳಿದಾಗ ಆಕೆಯ ತಾಯಿ ಹೌದು ಎಂಬಂತೆ ತಲೆಯಾಡಿಸಿದರು. ಕಲಿತ ಹೆಣ್ಣು ಮಗಳೊಬ್ಬಳು ಮನೆಯವರ ಸ್ನೇಹಿತರ ಅದೆಷ್ಟೇ ಒತ್ತಾಯದ ನಡುವೆಯೂ ಕೂಡ ಒಂದೇ ಒಂದು ಅಡುಗೆಯನ್ನು ಕಲಿಯಲಿಲ್ಲ....ಅಡುಗೆ ಮಾಡುವುದನ್ನು ಹೆಣ್ಣು ಮಕ್ಕಳು ಕಡ್ಡಾಯವಾಗಿ ಕಲಿಯಲೇಬೇಕು ಎಂಬ ಸಾಮಾಜಿಕ ಗ್ರಹಿಕೆಯನ್ನು ತಿರಸ್ಕರಿಸುವ ನಿಟ್ಟಿನಲ್ಲಿ ಆಕೆ ಹಾಗೆ ವರ್ತಿಸುತ್ತಿದ್ದಳು. ಅದೊಂದು ದಿನ ಆಕೆಯ ಪುಟ್ಟ ಸಹೋದರಿ ಅಕ್ಕನಿಗೆ ಅಕ್ಕ ನಿನಗೂ ಹಸಿವಾಗುತ್ತದಲ್ಲವೇ?' ಆದ್ದರಿಂದ ನೀನು ಅಡುಗೆ ಮಾಡುವುದನ್ನು ಕಲಿತುಕೋ ಎಂದು ಹೇಳಿದಾಗ ಅದನ್ನು ಮೂಲಭೂತ ಅವಶ್ಯಕತೆ ಎಂದು ಸಹಜವಾಗಿ ಸ್ವೀಕರಿಸಿದ ಆ ಹೆಣ್ಣು ಮಗಳು ಅಡುಗೆ ಮಾಡುವುದನ್ನು ಕಲಿತಳು. ಮೇಲಿನ ಎರಡು ಜಾಹೀರಾತುಗಳು ನಿಜವಾಗಿಯೂ ಅಡುಗೆ ಎಂಬ ಕಲೆ ಕೇವಲ ಹೆಣ್ಣು ಮಕ್ಕಳು ಕಲಿಯಲೇಬೇಕಾದ ಕೌಶಲವಲ್ಲ. ಈ ಭೂಮಿಯ ಮೇಲೆ ಹುಟ್ಟಿದ ಪ್ರತಿಯೊಬ್ಬರು ತಮ್ಮ ಬದುಕನ್ನು ನಿರ್ವಹಿಸಲು ಹೊಂದಿರಲೇಬೇಕಾದ ಅಗತ್ಯ ಮೂಲಭೂತ ಕೌಶಲಗಳಲ್ಲಿ ಒಂದು ಎಂಬುದನ್ನು ನಮಗೆ ತೋರಿಸಿಕೊಡುತ್ತವೆ.

ಮತ್ತೊಂದು ಕಡೆ ಇನ್ನೇನು ಕೆಲವೇ ದಿನಗಳಲ್ಲಿ ತನ್ನದೇ ವೃತ್ತಿಯಲ್ಲಿ ಇರುವ ಹೆಣ್ಣು ಮಗಳನ್ನು ವಿವಾಹವಾಗುತ್ತಿರುವ ಮಗನಿಗೆ ಅಡುಗೆ ಕೆಲಸಗಳನ್ನು ಕಲಿಸಿದ ತಾಯಿ ಇಬ್ಬರು ಒಟ್ಟಿಗೆ ಕೆಲಸಕ್ಕೆ ಹೋಗುತ್ತಾರೆ ಎಂದ ಮೇಲೆ ಮನೆಯ ಕೆಲಸಗಳನ್ನು ಕೂಡ ಒಟ್ಟಾಗಿ ನಿರ್ವಹಿಸಬೇಕು ಎಂದು ಹೇಳುವುದು ಹಾಗೂ ಅದಕ್ಕೆ ಮಗ ಅತ್ಯಂತ ಪ್ರೀತಿಯಿಂದ ಸಮ್ಮತಿಸಿ ಕಲಿಯಲು ಉತ್ಸಾಹ ತೋರುವುದು ಸ್ವಾಗತಾರ್ಹ ಬೆಳವಣಿಗೆ. ಮುಂದಿನ ದಿನಮಾನಗಳಲ್ಲಿ ಈ ಮಾದರಿಯನ್ನು ನಾವು ಇನ್ನೂ ಹೆಚ್ಚು ಅಳವಡಿಸಿಕೊಳ್ಳಬೇಕಾದ ಅಗತ್ಯತೆ ಖಂಡಿತವಾಗಿಯೂ ಇದೆ. ನಿಜ ಅಲ್ಲವೇ ಸ್ನೇಹಿತರೆ ?... ಗೃಹ ಕೃತ್ಯಗಳು ಯಾರು ಯಾರಿಗೂ ಮಾಡಬಹುದಾದ ಉಪಕಾರವಲ್ಲ ಬದಲಾಗಿ



ಅವು ಭೂಮಿಯ ಮೇಲೆ ಹುಟ್ಟಿದ ಪ್ರತಿಯೊಬ್ಬ ವ್ಯಕ್ತಿಯು ತನ್ನ ಬದುಕಿನಲ್ಲಿ ಅಳವಡಿಸಿಕೊಳ್ಳಲೇಬೇಕಾದ ಜೀವನ ಕೌಶಲ್ಯಗಳು. ಅಡುಗೆ ಮಾಡುವುದು ಕೇವಲ ಹೆಣ್ಣು ಮಕ್ಕಳ ಕೆಲಸವಲ್ಲ. ಅಂತೆಯೇ ಪಾತ್ರೆ ತೊಳೆಯುವ, ಬಟ್ಟೆ ಒಗೆಯುವ ಮನೆಯನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವ ಎಲ್ಲಾ ಕೆಲಸಗಳು ಕೇವಲ ಮಹಿಳೆಯರವಲ್ಲ. ಅಡುಗೆ ಮಾಡುವ ಮೂಲಕ ಗಂಡಸು ಹೆಣ್ಣಾಗುವುದಿಲ್ಲ ಅಥವಾ ಅಡುಗೆ ಮಾಡುವ ಮನೆ ಕೆಲಸಗಳನ್ನು ನಿರ್ವಹಿಸುವುದು ಲಿಂಗ ಆಧಾರದ ಕೆಲಸ ಕಾರ್ಯಗಳಲ್ಲ. ಮಾತೆತ್ತಿದರೆ ಭೀಮಸೇನ, ನಳ ಮಹಾರಾಜರು ಅತ್ಯಂತ ಪಾಕ ಪ್ರವೀಣರು ಎಂದು ಬೊಬ್ಬೆ ಹೊಡೆಯುವ ಗಂಡಸರು ತಮ್ಮ ತಮ್ಮ ಮನೆಗಳಲ್ಲಿ ಒಂದು ಕಪ್ ಚಹಾ ಮಾಡಿಕೊಳ್ಳಲು ಕೂಡ ಪರದಾಡುವುದನ್ನು ನಾವು ನೋಡುತ್ತೇವೆ. ಅದು ಹೋಗಲಿ ಕುಟುಂಬದ ಇತರ ಮಹಿಳಾ ಸದಸ್ಯರೇ ಅವರಿಗೆ ಅವರು ಕುಳಿತಲ್ಲಿಯೇ ನೀರು ಚಹಾ ತಿಂಡಿ, ಊಟಗಳನ್ನು ಕಾಲಕಾಲಕ್ಕೆ ಒದಗಿಸಬೇಕು. ಒಗೆದು ಇಸ್ತ್ರಿ ಮಾಡಿದ ಬಟ್ಟೆಗಳನ್ನು ಪೂರೈಸಬೇಕು, ಓರಣವಾಗಿ ಮನೆಯನ್ನು ಇಟ್ಟುಕೊಳ್ಳಬೇಕು. ಹಬ್ಬ ಹುಣ್ಣಿಮೆಗಳಲ್ಲಿ ಮನೆ ದೇವರ ಪೂಜೆಯಿಂದ ಹಿಡಿದು ಹಬ್ಬದ ಅಡುಗೆಯನ್ನು ಕೂಡ ಹೆಣ್ಣು ಮಕ್ಕಳೇ ಮಾಡ್ತಾ ಬಂದಿದ್ದು ಅದೊಂದು ರೀತಿಯಲ್ಲಿ ಗಂಡು ಮಕ್ಕಳ ಪಾತ್ರ ಕೇವಲ ತಂದು ಹಾಕುವುದು ಎಂಬಂತಹ ಪರಿಸ್ಥಿತಿ ಅವರದ್ದಾಗಿದೆ.

ನಮ್ಮ ಮನೆಯ ಗಂಡು ಮಕ್ಕಳನ್ನು ನಾವು ರಾಜಾ ಬೇಟಾ ಎಂಬಂತೆ ಬೆಳೆಸುತ್ತಿದ್ದು ದೈನಂದಿನ ಎಲ್ಲ ಜವಾಬ್ದಾರಿಗಳಿಂದ ದೂರವಿರಿಸುತ್ತೇವೆ... ಆದರೆ ಹೀಗೆ ಗಂಡು ಮಕ್ಕಳನ್ನು ಬೆಳೆಸುವ ಮೂಲಕ ನಾವು ಅವರನ್ನು ಇತರರ ಮೇಲೆ ಅವಲಂಬನೆ ಹೊಂದಿರುವಂತೆ ಮಾಡುತ್ತೇವೆ. ತಮ್ಮೆಲ್ಲ ಕೆಲಸ ಕಾರ್ಯಗಳನ್ನು ತಾವೇ ನಿರ್ವಹಿಸಿಕೊಳ್ಳುವ ಓರ್ವ ಸಮರ್ಥ ವ್ಯಕ್ತಿಯನ್ನಾಗಿಸದೆ ಪರಾವಲಂಬಿ ಆಗಿಸುತ್ತೇವೆ. ಗೃಹ ಕೃತ್ಯಗಳನ್ನು ತಮ್ಮ ಮಕ್ಕಳ ನಡುವೆ ಹಂಚಿ ಕೊಟ್ಟು ಕೆಲಸ ಮಾಡಿಸುವ ಮೂಲಕ ಪಾಲಕರು ಕೌಟುಂಬಿಕ ಜವಾಬ್ದಾರಿಯನ್ನು ಅವರ ಮೇಲೆ ಹೊರಿಸಬೇಕು. ಇದು ಅವರನ್ನು ಆತ್ಮ ನಿರ್ಭರ, ಕಾಳಜಿಪರ ಹಾಗೂ ಆತ್ಮವಿಶ್ವಾಸವುಳ್ಳ ನಾಗರಿಕರನ್ನಾಗಿಸುತ್ತದೆ. ಮಗು ಗಂಡಿರಲಿ ಹೆಣ್ಣಿರಲಿ ಇದು ನನ್ನ ಕೆಲಸ ನಾನು ಇದನ್ನು ಮಾಡುವ ಮೂಲಕ ನನ್ನ ಜವಾಬ್ದಾರಿಯನ್ನು ನಿರ್ವಹಿಸುತ್ತೇನೆ ಎಂದು ಹೇಳಿದಾಗ ಅದು ಸಂಪೂರ್ಣ ಆತ್ಮ ನಿರ್ಭರತೆಯ ಸ್ವತಂತ್ರ ವ್ಯಕ್ತಿತ್ವವನ್ನು ಸೂಚಿಸುತ್ತದೆ.... ಅದು ನಿಜವಾದ ಸಬಲೀಕರಣ. ಹೋಂ ಮೇಕರ್ ಎಂದರೆ ಕೇವಲ ಅದು ಮಹಿಳೆಯರು ಎಂಬಂತೆ ಅನಾದಿಕಾಲದಿಂದಲೂ ನಮ್ಮಲ್ಲಿ ಚಾಲ್ತಿಯಲ್ಲಿದೆ.

ಗೃಹ ಕೃತ್ಯಗಳು ಕೇವಲ ಹೆಣ್ಣು ಮಕ್ಕಳಿಗೆ ಮಾತ್ರ ಸೀಮಿತವಲ್ಲ ಎಂಬುದಕ್ಕೆ ಪುಷ್ಟಿ ನೀಡಲು ಇತ್ತೀಚೆಗೆ ಕರ್ನಾಟಕದ ಉಚ್ಚ ನ್ಯಾಯಾಲಯವು ಹೋಂ ಮೇಕರ್ ಎಂಬ ಪದವನ್ನು ಗಂಡು ಮತ್ತು ಹೆಣ್ಣು ಎರಡು ಆಗಿರಬಹುದಾದ ನ್ಯೂಟ್ರಲ್ ಅಂದರೆ ತಟಸ್ಥ ಲಿಂಗ ಅಂದರೆ ಎಲ್ಲರಿಗೂ ಅನ್ವಯಿಸಲಾಗುತ್ತದೆ. ವ್ಯಕ್ತಿ ತಮ್ಮ ಮನೆಯ ದೈನಂದಿನ ಖರ್ಚು ವೆಚ್ಚಗಳನ್ನು ನೋಡಿಕೊಳ್ಳಲು ದುಡಿಯುವ ಕೂಲಿಯಾಗಿದ್ದರೂ, ದೊಡ್ಡ ಆಫೀಸರ್ ಆಗಿದ್ದರೂ ಅದು ಗಂಡೇ ಇರಲಿ, ಹೆಣ್ಣೇ ಇರಲಿ ಗೃಹ ಕೃತ್ಯಗಳನ್ನು ಮಾಡಿಕೊಳ್ಳಲು ಕಲಿತಿರಬೇಕು ಹಾಗೂ ಮಾಡಲೂಬೇಕು ಎಂದು ಕರ್ನಾಟಕ ಉಚ್ಚ ನ್ಯಾಯಾಲಯವು ಹೇಳಿದೆ. ಪಂಪಾಲಾಲ್ ಎಂಬ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಡ್ರೈವರ್ ಆಗಿ ಕಾರ್ಯನಿರ್ವಹಿಸುತ್ತಿದ್ದ ವ್ಯಕ್ತಿ ಅಪಘಾತದಲ್ಲಿ ತೀವ್ರ ಗಾಯಗೊಂಡ. ನಂತರ ಪರಿಹಾರಕ್ಕೆ ಅರ್ಜಿ ಗುಜರಾಯಿಸಿದ ಸಂಬಂಧ ನಡೆದ ವಿಚಾರಣೆಯಲ್ಲಿ ಗೃಹಕೃತ್ಯದ ವಿಷಯ ಮುನ್ನೆಲೆಗೆ ಬಂದಿತ್ತು.

ಅವರಿಗೆ ವಿರೋಧವಾದ ಎದುರಾಳಿಗಳ ವಾದ ಗಮನಾರ್ಹವಾಗಿತ್ತು. ಸ್ನಾತಕೋತ್ತರ ಪದವಿಯನ್ನು ಹೊಂದಿದ್ದ ಹಾಗೂ ಈ ಹಿಂದೆ ಕಾಲೇಜೊಂದರಲ್ಲಿ ಉಪನ್ಯಾಸಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಹೆಣ್ಣು ಮಗಳನ್ನು ಗೃಹಿಣಿ ಎಂದು ಹೇಳಲು ಬರುವುದಿಲ್ಲ ಎಂಬ ಮಾತನ್ನು ಉಚ್ಚ ನ್ಯಾಯಾಲಯವು ತಿರಸ್ಕರಿಸಿದ್ದು ಒಪ್ಪಲಿಲ್ಲ ತನ್ನ ತೀರ್ಪಿನಲ್ಲಿ ಉಚ್ಚ ನ್ಯಾಯಾಲಯವು ಹೆಣ್ಣುಮಗಳು ಅನಕ್ಷರಸ್ಥ ಳೇ ಆಗಬೇಕಾಗಿಲ್ಲ ಆಕೆ ದಿನದ 24 ಗಂಟೆಯೂ ಮನೆಯಲ್ಲಿ ಇರುವ ಹಾಗೂ ಗೃಹ ಕೃತ್ಯಗಳನ್ನು ನಿಭಾಯಿಸುವುದನ್ನು ಗೃಹಿಣಿ ಎಂದು ಹೇಳಲಾಗುವುದಿಲ್ಲ. ಗೃಹಿಣಿಯಾಗಿರುವ ಆಕೆಗೆ 1.96 ಲಕ್ಷ ರೂ ಹಣವನ್ನು ಆರು ಶೇಕಡ ವಾರ್ಷಿಕ ಬಡ್ಡಿಯೊಂದಿಗೆ ನೀಡಬೇಕು ಎಂದು ಆದೇಶ ಮಾಡಿತು. ಆದರೂ ಕೂಡ ಗೃಹ ಕೃತ್ಯಗಳು ಪ್ರಾಥಮಿಕವಾಗಿ ಕೇವಲ ಹೆಣ್ಣು ಮಕ್ಕಳದ್ದೇ ಎಂಬಂತೆ ನಾವೇಕೆ ಯೋಚಿಸುತ್ತೇವೆ ಎಂಬುದು ಪ್ರಶ್ನೆಯಾಗಿದೆ ಉಳಿಯುತ್ತದೆ.

**ಹಾಗಾದರೆ ನಾವೇನು ಮಾಡಬೇಕು**

ಗೃಹ ಕೃತದ ಎಲ್ಲಾ ಕೆಲಸಗಳನ್ನು ಯಾವುದೇ ಬಗೆಯ ಲಿಂಗ ಭೇದವಿಲ್ಲವೇ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಸಮಾನವಾಗಿ ಕಲಿಸಬೇಕು. ದೈನಂದಿನ ಬದುಕಿನಲ್ಲಿ ಕುಟುಂಬದ ಕೆಲಸ ಕಾರ್ಯಗಳನ್ನು ನೋಡಿಕೊಳ್ಳಲು, ಅಡುಗೆ ಮಾಡುವುದನ್ನು, ಮನೆಯ ಇನ್ನಿತರ ಕೆಲಸ ಕಾರ್ಯಗಳನ್ನು ಮಾಡಿಕೊಳ್ಳುವುದನ್ನು ಸ್ವಲ್ಪವಾದರೂ ಕಲಿತಿರಲೇಬೇಕು... ಅದು ಅವರ ಮೂಲಭೂತ ಅವಶ್ಯಕತೆಯೂ ಹೌದು. ಕಲಿತಿರುವವರು ಬದುಕಿನ ಎಲ್ಲ ಬಗೆಯ ಪರೀಕ್ಷೆಗಳಿಗೆ ಸಿದ್ಧರಾಗಿರುತ್ತಾರೆ. ಕಳೆದ ಒಂದೆರಡು ದಶಕಗಳಿಂದ ವಿದೇಶಗಳಲ್ಲಿ ಶಿಕ್ಷಣ ಪಡೆಯಲು ಹೋಗುತ್ತಿರುವ ಯುವಕ ಯುವತಿಯರು ತಮ್ಮ ದೈನಂದಿನ ಬದುಕಿಗೆ ಅತ್ಯವಶ್ಯಕವಾದ ಈ ಎಲ್ಲವನ್ನು ಕಲಿಯುತ್ತಿದ್ದಾರೆ ಆದರೆ ಒಂದೊಮ್ಮೆ ಮದುವೆಯಾದರೆ ಕೂಡಲೇ ಇದೆಲ್ಲವನ್ನು ಹೆಣ್ಣು ಮಕ್ಕಳ ಜವಾಬ್ದಾರಿಗೆ ಒಪ್ಪಿಸಿ ಗಂಡಸರು ತಾವು ನಿಶ್ಚಿಂತರಾಗುವರು.... ಇದು ಸಲ್ಲದು. ಗೃಹ ಕೃತ್ಯಗಳನ್ನು ಅರಿತಿರುವುದು ವೈಯುಕ್ತಿಕವಾಗಿ ನಮ್ಮೆಲ್ಲ ಕೆಲಸಗಳನ್ನು ನಾವೇ ಮಾಡಿಕೊಳ್ಳುವುದು ಆರ್ಥಿಕ ಸ್ವಾತಂತ್ರ್ಯವನ್ನು ಗಳಿಸಿದಷ್ಟೇ ಒಳ್ಳೆಯದು. ಗಂಡಿರಲಿ ಹೆಣ್ಣಿರಲಿ ಸಮಯ ಸಂದರ್ಭ ಹಾಗೂ ಪರಿಸ್ಥಿತಿಗಳಿಗೆ ಅನುಗುಣವಾಗಿ ತಮಗೆ ತಾವು ಪರಾವಲಂಬಿ ಗಳಾಗದೆ ಇರುವ ನಿಟ್ಟಿನಲ್ಲಿ ಎಲ್ಲ ಬಗೆಯುವ ಗೃಹ ಕೃತ್ಯಗಳ ನಿರ್ವಹಣೆಯ ಜವಾಬ್ದಾರಿಯನ್ನು ತಮ್ಮ ದೈನಂದಿನ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು.

ಏನಂತೀರಾ ಸ್ನೇಹಿತರೆ ?



ವೀಣಾ ಹೇಮಂತ್ ಗೌಡ ಪಾಟೀಲ್

# ಹಸುವಿನ ಹಾಲು ಆರೋಗ್ಯ, ಪೋಷಣೆ ಮತ್ತು ನಮ್ಮ ಬದುಕಿನ ಅವಿಭಾಜ್ಯ ಅಂಗ

ಹಸುವಿನ ಹಾಲು ಭಾರತೀಯರ ಆಹಾರ ಪದ್ಧತಿಯಲ್ಲಿ ಶತಮಾನಗಳಿಂದಲೂ ವಿಶೇಷ ಸ್ಥಾನ ಪಡೆದಿರುವ ಪೌಷ್ಟಿಕ ಆಹಾರವಾಗಿದೆ. ಗ್ರಾಮೀಣ ಬದುಕಿನಿಂದ ಹಿಡಿದು ನಗರ ಜೀವನದವರೆಗೆ, ಬೆಳಗಿನ ಉಪಾಹಾರದಿಂದ ಹಿಡಿದು ಮಕ್ಕಳ ಆಹಾರ ಪದ್ಧತಿಯವರೆಗೆ ಹಾಲು ತನ್ನದೇ ಆದ ಮಹತ್ವವನ್ನು ಹೊಂದಿದೆ. ಹಾಲು ಕೇವಲ ಒಂದು ಪಾನೀಯವಲ್ಲ; ಇದು ಪ್ರೋಟೀನ್, ಕ್ಯಾಲ್ಸಿಯಂ, ರಂಜಕ, ವಿಟಮಿನ್‌ಗಳು ಹಾಗೂ ದೇಹಕ್ಕೆ ಅಗತ್ಯವಾದ ಹಲವು ಪೋಷಕಾಂಶಗಳನ್ನು ಒದಗಿಸುವ ಆಹಾರವಾಗಿದೆ.

ಭಾರತೀಯ ಸಂಸ್ಕೃತಿಯಲ್ಲಿಯೂ ಹಸು ಮತ್ತು ಹಸುವಿನ ಹಾಲಿಗೆ ವಿಶೇಷ ಗೌರವವಿದೆ. ಹಬ್ಬ-ಹರಿದಿನಗಳು, ಪೂಜೆ, ಧಾರ್ಮಿಕ ಆಚರಣೆಗಳು ಹಾಗೂ ದೈನಂದಿನ ಜೀವನದಲ್ಲಿಯೂ ಹಾಲು ಹಲವು ರೀತಿಯಲ್ಲಿ ಬಳಕೆಯಾಗುತ್ತದೆ. ಮೊಸರು, ಮಜ್ಜಿಗೆ, ತುಪ್ಪ, ಬೆಣ್ಣೆ, ಪನ್ನೀರ್ ಸೇರಿದಂತೆ ಅನೇಕ ಆಹಾರ ಪದಾರ್ಥಗಳ ತಯಾರಿಕೆಗೆ ಹಾಲು ಮೂಲ ಪದಾರ್ಥವಾಗಿದೆ.

**ಹಾಲಿನಲ್ಲಿರುವ ಪೋಷಕಾಂಶಗಳ ಮಹತ್ವ**


ಹಸುವಿನ ಹಾಲಿನಲ್ಲಿ ದೇಹದ ಬೆಳವಣಿಗೆ ಮತ್ತು ನಿರ್ವಹಣೆಗೆ ಅಗತ್ಯವಾಗಿರುವ ಹಲವು ಪೋಷಕಾಂಶಗಳಿವೆ. ಮುಖ್ಯವಾಗಿ ಕ್ಯಾಲ್ಸಿಯಂ ಮತ್ತು ಪ್ರೋಟೀನ್‌ಗಳು ಗಮನಾರ್ಹವಾಗಿವೆ. ಕ್ಯಾಲ್ಸಿಯಂ ಮೂಳೆ ಮತ್ತು ಹಲ್ಲುಗಳ ಸಾಮಾನ್ಯ ಆರೋಗ್ಯಕ್ಕೆ ಅಗತ್ಯವಾಗಿದ್ದು, ಪ್ರೋಟೀನ್ ದೇಹದ ಸ್ನಾಯುಗಳು ಹಾಗೂ ವಿವಿಧ ಅಂಗಾಂಶಗಳ ನಿರ್ಮಾಣ ಮತ್ತು ದುರಸ್ತಿಗೆ ಸಹಕಾರಿಯಾಗಿದೆ. ಹಾಲಿನಲ್ಲಿ ರಂಜಕ, ಪೊಟ್ಯಾಸಿಯಂ, ವಿಟಮಿನ್ ಃ12 ಮತ್ತು ಇತರ ಪೋಷಕಾಂಶಗಳೂ ದೊರೆಯುತ್ತವೆ. ಹಾಲಿನ ಪೌಷ್ಟಿಕ ಗುಣವು ಅದರ ಕೊಬ್ಬಿನ ಪ್ರಮಾಣ ಮತ್ತು ಸಂಸ್ಕರಣೆಯ ವಿಧಾನವನ್ನು ಅವಲಂಬಿಸಿ ಬದಲಾಗಬಹುದು.

**ಮಕ್ಕಳ ಬೆಳವಣಿಗೆಯಲ್ಲಿ ಹಾಲಿನ ಪಾತ್ರ**

ಮಕ್ಕಳ ಬೆಳವಣಿಗೆಯ ಹಂತದಲ್ಲಿ ಸಮತೋಲಿತ ಆಹಾರ ಬಹಳ ಮುಖ್ಯ. ಹಾಲು ಮಕ್ಕಳ ಆಹಾರದಲ್ಲಿ ಪ್ರೋಟೀನ್ ಮತ್ತು ಕ್ಯಾಲ್ಸಿಯಂನಂತಹ ಪೋಷಕಾಂಶಗಳನ್ನು ಪಡೆಯಲು ಒಂದು ಉಪಯುಕ್ತ ಮೂಲವಾಗಬಹುದು. ಆದರೆ ಮಗುವಿನ ವಯಸ್ಸು, ಆಹಾರ ಪದ್ಧತಿ ಮತ್ತು ವೈಯಕ್ತಿಕ ಅಗತ್ಯಗಳನ್ನು ಗಮನಿಸಿ ಹಾಲನ್ನು ಆಹಾರದ ಒಂದು ಭಾಗವಾಗಿ ನೀಡುವುದು ಸೂಕ್ತ. ಹಾಲು ಮಾತ್ರವೇ ಸಂಪೂರ್ಣ ಆಹಾರವಲ್ಲ. ತರಕಾರಿ, ಹಣ್ಣು, ಧಾನ್ಯ, ಬೇಳೆ, ಮೊಟ್ಟೆ ಅಥವಾ ಇತರ ಪ್ರೋಟೀನ್ ಮೂಲಗಳು ಸೇರಿದಂತೆ ವೈವಿಧ್ಯಮಯ ಆಹಾರವೂ ಮಕ್ಕಳಿಗೆ ಅಗತ್ಯವಾಗಿದೆ.

**ವಯಸ್ಕರಿಗೂ ಉಪಯುಕ್ತ**

ಹಾಲು ಮಕ್ಕಳಿಗೆ ಮಾತ್ರವಲ್ಲದೆ ವಯಸ್ಕರಿಗೂ ಆಹಾರದ ಒಂದು ಭಾಗವಾಗಬಹುದು. ದೈನಂದಿನ ಆಹಾರದಲ್ಲಿ ಸಾಕಷ್ಟು ಕ್ಯಾಲ್ಸಿಯಂ ಮತ್ತು ಪ್ರೋಟೀನ್ ಪಡೆಯಲು ಹಾಲು ಅಥವಾ




ವಾ ಹಾಲಿನಿಂದ ತಯಾರಿಸಿದ ಆಹಾರ ಪದಾರ್ಥಗಳು ಸಹಕಾರಿಯಾಗುತ್ತವೆ. ವಿಶೇಷವಾಗಿ ದೈಹಿಕ ಚಟುವಟಿಕೆ ಮಾಡುವವರು, ಬೆಳೆಯುತ್ತಿರುವ ಯುವಕರು ಮತ್ತು ವಯೋವೃದ್ಧರು ತಮ್ಮ ಒಟ್ಟಾರೆ ಆಹಾರದಲ್ಲಿ ಅಗತ್ಯ ಪೋಷಕಾಂಶಗಳನ್ನು ಸಮರ್ಪಕವಾಗಿ ಪಡೆಯುವುದು ಮುಖ್ಯ. ಹಾಲು ಅದಕ್ಕೆ ಸಹಾಯಕವಾದ ಆಹಾರಗಳಲ್ಲಿ ಒಂದಾಗಿದೆ.

**ಹಾಲಿನಿಂದ ತಯಾರಾಗುವ ಆಹಾರಗಳು**

ಹಸುವಿನ ಹಾಲಿನ ಮಹತ್ವವನ್ನು ಕೇವಲ ಹಾಲಿನ ಸೇವನೆಗೆ ಸೀಮಿತಗೊಳಿಸಲಾಗುವುದಿಲ್ಲ. ಹಾಲಿನಿಂದ ಮೊಸರು, ಮಜ್ಜಿಗೆ, ಬೆಣ್ಣೆ, ತುಪ್ಪ, ಪನ್ನೀರ್, ಖೋವಾ ಸೇರಿದಂತೆ ಅನೇಕ ಆಹಾರ ಪದಾರ್ಥಗಳನ್ನು ತಯಾರಿಸಲಾಗುತ್ತದೆ. ಮೊಸರು ಜೀರ್ಣಕ್ರಿಯೆಗೆ ಸಂಬಂಧಿಸಿದಂತೆ ಉಪಯುಕ್ತವಾಗಿರುವ ಜೀವಂತ ಬ್ಯಾಕ್ಟೀರಿಯಾಗಳನ್ನು ಹೊಂದಿರಬಹುದು. ಮಜ್ಜಿಗೆ ಹಗುರವಾದ ಪಾನೀಯವಾಗಿದ್ದು, ಬೇಸಿಗೆಯಲ್ಲಿ ಅನೇಕರು ಸೇವಿಸುತ್ತಾರೆ. ಪನ್ನೀರ್ ಪ್ರೋಟೀನ್‌ನ ಒಂದು ಮೂಲವಾಗಿದ್ದು, ಹಲವು ಭಾರತೀಯ ಖಾದ್ಯಗಳಲ್ಲಿ ಬಳಸಲಾಗುತ್ತದೆ. ತುಪ್ಪ ಭಾರತೀಯ ಅಡುಗೆ ಮತ್ತು ಸಂಪ್ರದಾಯಗಳಲ್ಲಿ ಬಹಳ ಹಿಂದಿನಿಂದಲೂ ಬಳಕೆಯಲ್ಲಿರುವ ಹಾಲಿನ ಉತ್ಪನ್ನವಾಗಿದೆ.

**ಗ್ರಾಮೀಣ ಆರ್ಥಿಕತೆಯಲ್ಲಿ ಹಾಲಿನ ಮಹತ್ವ**

ಹಸುವಿನ ಹಾಲು ಆರೋಗ್ಯದ ವಿಚಾರ ಮಾತ್ರವಲ್ಲ; ಗ್ರಾಮೀಣ ಆರ್ಥಿಕತೆಯಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತದೆ. ಅನೇಕ ಕುಟುಂಬಗಳು ಹೈನುಗಾರಿಕೆಯನ್ನು ತಮ್ಮ ಜೀವನೋಪಾಯದ ಭಾಗವನ್ನಾಗಿ ಮಾಡಿಕೊಂಡಿವೆ. ಹಸು ಸಾಕಾಣಿಕೆ ಮೂಲಕ ಹಾಲು ಉತ್ಪಾದಿಸಿ ಮಾರಾಟ ಮಾಡುವುದರಿಂದ ರೈತ ಕುಟುಂಬಗಳಿಗೆ ನಿಯಮಿತ ಆದಾಯದ ಮೂಲ ದೊರೆಯುತ್ತದೆ. ಹಾಲು ಸಂಗ್ರಹಣೆ, ಸಾಗಣೆ, ಸಂಸ್ಕರಣೆ, ಮೊಸರು-ಬೆಣ್ಣೆ-ತುಪ್ಪ ಉತ್ಪಾದನೆ ಮತ್ತು ಮಾರುಕಟ್ಟೆ ಸೇರಿದಂತೆ ಹಾಲಿನ ಕ್ಷೇತ್ರದೊಂದಿಗೆ ಅನೇಕ ಜನರ ಉದ್ಯೋಗವೂ ನೇರವಾಗಿ ಅಥವಾ ಪರೋಕ್ಷವಾಗಿ ಸಂಬಂಧಿಸಿದೆ.

**ಶುದ್ಧತೆ ಮತ್ತು ಗುಣಮಟ್ಟ ಅತ್ಯಂತ ಮುಖ್ಯ**

ಹಾಲಿನ ಪೌಷ್ಟಿಕತೆ ಎಷ್ಟೇ ಮುಖ್ಯವಾಗಿದ್ದರೂ ಅದರ ಶುದ್ಧತೆ ಮತ್ತು ಸುರಕ್ಷತೆ ಇನ್ನೂ ಮುಖ್ಯ. ಹಾಲು ಆರೋಗ್ಯಕರವಾಗಿ ಪಡೆಯಲು ಹಸುಗಳ ಆರೋಗ್ಯ, ಸ್ವಚ್ಛ ಹಾಲುಹೀರುವ ವಿಧಾನ, ಶುದ್ಧ ಪಾತ್ರೆಗಳು, ಸರಿಯಾದ ಸಂಗ್ರಹಣೆ ಮತ್ತು ಸೂಕ್ತ ಶೀತಲೀಕರಣ ವ್ಯವಸ್ಥೆ ಅಗತ್ಯ. ಕಚ್ಚಾ ಹಾಲಿನಲ್ಲಿ ಹಾನಿಕಾರಕ ಸೂಕ್ಷ್ಮಜೀವಿಗಳಿರುವ ಸಾಧ್ಯತೆ ಇರುವುದರಿಂದ ಸುರಕ್ಷಿತವಾಗಿ ಸಂಸ್ಕರಿಸಿದ ಅಥವಾ ಸರಿಯಾಗಿ ಕುದಿಸಿದ ಹಾಲನ್ನು ಸೇವಿಸುವುದು ಉತ್ತಮ. ಹಾಲನ್ನು ಹೆಚ್ಚು ಸಮಯ ಕೋಣೆಯ ಉಷ್ಣಾಂಶದಲ್ಲಿ ಇಡುವುದನ್ನು ತಪ್ಪಿಸಬೇಕು.

**ಎಲ್ಲರಿಗೂ ಹಾಲು ಸೂಕ್ತವೇ**

ಹಾಲು ಬಹುತೇಕ ಜನರಿಗೆ ಪೌಷ್ಟಿಕ ಆಹಾರವಾಗಿದ್ದರೂ ಎಲ್ಲರ ದೇಹವೂ ಒಂದೇ ರೀತಿಯಾಗಿ ಪ್ರತಿಕ್ರಿಯಿಸುವುದಿಲ್ಲ. ಕೆಲವರಿಗೆ ಲ್ಯಾಕ್ಟೋಸ್ ಅಸಹಿಷ್ಣುತೆ ಇರಬಹುದು. ಅಂತಹವರು ಹಾಲು ಸೇವಿಸಿದ ನಂತರ ಹೊಟ್ಟೆ ಉಬ್ಬರ, ಅಸ್ವಸ್ಥತೆ ಅಥವಾ ಇತರ ಜೀರ್ಣಕ್ರಿಯೆಯ ತೊಂದರೆಗಳನ್ನು ಅನುಭವಿಸಬಹುದು. ಹೀಗಾಗಿ ದೇಹದ ಪ್ರತಿಕ್ರಿಯೆಯನ್ನು ಗಮನಿಸುವುದು ಮುಖ್ಯ. ಹಾಲು ಸೇವನೆಯಿಂದ ನಿರಂತರ ಸಮಸ್ಯೆ ಉಂಟಾದರೆ ವೈದ್ಯರು ಅಥವಾ ಆಹಾರ ತಜ್ಞರ ಸಲಹೆ ಪಡೆಯುವುದು ಉತ್ತಮ.

**ಹಾಲಿನ ಬಗ್ಗೆ ಇರುವ ತಪ್ಪು ಕಲ್ಪನೆಗಳು**

ಹಾಲನ್ನು ಕುರಿತು ಸಮಾಜದಲ್ಲಿ ಹಲವು ನಂಬಿಕೆಗಳಿವೆ. ಆದರೆ ಪ್ರತಿಯೊಂದು ನಂಬಿಕೆಯೂ ವೈಜ್ಞಾನಿಕವಾಗಿ ಸಾಬೀತಾಗಿರುವುದಿಲ್ಲ. ಹಾಲು ಒಂದು ಪೌಷ್ಟಿಕ ಆಹಾರವಾಗಿದ್ದರೂ ಅದು ಎಲ್ಲಾ ರೋಗಗಳಿಗೆ ಔಷಧಿಯಲ್ಲ. ಆರೋಗ್ಯಕರ ಜೀವನಕ್ಕಾಗಿ ಹಾಲಿನ ಜೊತೆಗೆ ಸಮತೋಲಿತ ಆಹಾರ, ನಿಯಮಿತ ದೈಹಿಕ ಚಟುವಟಿಕೆ, ಸಾಕಷ್ಟು ನಿದ್ರೆ ಮತ್ತು ಸ್ವಚ್ಛ ಜೀವನಶೈಲಿಯೂ ಅಗತ್ಯ. ಹಾಲಿನ ಗುಣಮಟ್ಟ, ಕೊಬ್ಬಿನ ಪ್ರಮಾಣ ಮತ್ತು ಸಂಸ್ಕರಣಾ ವಿಧಾನಗಳನ್ನು ಗಮನಿಸಿ ಸೂಕ್ತ ಪ್ರಮಾಣದಲ್ಲಿ ಸೇವಿಸುವುದು ಹೆಚ್ಚು ಉತ್ತಮ.

**ರೈತ ಮತ್ತು ಹಸುವಿನ ಸಂಬಂಧ**

ಗ್ರಾಮೀಣ ಕರ್ನಾಟಕದ ಬದುಕಿನಲ್ಲಿ ಹಸು ಕೇವಲ ಜಾನುವಾರು ಅಲ್ಲ; ಅನೇಕ ರೈತ ಕುಟುಂಬಗಳ ಬದುಕಿನ ಒಂದು ಭಾಗವಾಗಿದೆ. ಹಸುವಿನ ಆರೈಕೆ, ಮೇವು, ನೀರು, ಸ್ವಚ್ಛತೆ ಮತ್ತು ಪಶುವೈದ್ಯಕೀಯ ಸೇವೆಗಳ ಬಗ್ಗೆ ರೈತರು ಗಮನ ನೀಡಿದಾಗ ಉತ್ತಮ ಗುಣಮಟ್ಟದ ಹಾಲು ಉತ್ಪಾದಿಸಲು ಸಾಧ್ಯವಾಗುತ್ತದೆ. ಹಸು ಆರೋಗ್ಯವಾಗಿದ್ದರೆ ಮಾತ್ರ ಉತ್ತಮ ಹಾಲು ಉತ್ಪಾದನೆ ಸಾಧ್ಯ. ಆದ್ದರಿಂದ ಹೈನುಗಾರಿಕೆಯಲ್ಲಿ ಪಶುಗಳ ಕಲ್ಯಾಣಕ್ಕೂ ಸಮಾನ ಮಹತ್ವ ನೀಡಬೇಕು.

**ಪ್ರಕೃತಿ, ಕೃಷಿ ಮತ್ತು ಹೈನುಗಾರಿಕೆ**

ಹೈನುಗಾರಿಕೆ ಕೃಷಿಯೊಂದಿಗೆ ನಿಕಟವಾಗಿ ಸಂಬಂಧಿಸಿದೆ. ರೈತರು ಬೆಳೆಗಳ ಅವಶೇಷಗಳನ್ನು ಜಾನುವಾರುಗಳ ಆಹಾರವಾಗಿ ಬಳಸಬಹುದು. ಮತ್ತೊಂದೆಡೆ ಜಾನುವಾರುಗಳಿಂದ ದೊರೆಯುವ ಸಾವಯವ ಗೊಬ್ಬರ ಕೃಷಿಗೆ ಸಹಕಾರಿಯಾಗುತ್ತದೆ. ಹೀಗಾಗಿ ಕೃಷಿ ಮತ್ತು ಹೈನುಗಾರಿಕೆಯನ್ನು ಸಮನ್ವಯಗೊಳಿಸಿದ ಗ್ರಾಮೀಣ ಆರ್ಥಿಕ ವ್ಯವಸ್ಥೆ ಅನೇಕ ಕುಟುಂಬಗಳಿಗೆ ಪ್ರಯೋಜನಕಾರಿಯಾಗಬಹುದು.

**ಹಾಲು ನಮ್ಮ ಆಹಾರ ಸಂಸ್ಕೃತಿಯ ಭಾಗ**

ಹಾಲಿನೊಂದಿಗೆ ಭಾರತೀಯರ ಭಾವನಾತ್ಮಕ ಮತ್ತು ಸಾಂಸ್ಕೃತಿಕ ಸಂಬಂಧವೂ ಗಾಢವಾಗಿದೆ. ಹಬ್ಬಗಳ ಸಂದರ್ಭದಲ್ಲಿ ಸಿಹಿ ಪದಾರ್ಥಗಳು, ಪಾಯಸ, ಕ್ಷೀರಾನ್ನ ಸೇರಿದಂತೆ ಹಲವು ತಿನಿಸುಗಳಲ್ಲಿ ಹಾಲಿನ ಬಳಕೆ ಕಂಡುಬರುತ್ತದೆ. ಮನೆಗಳಲ್ಲಿ ಬೆಳಗಿನ ಚಹಾ ಅಥವಾ ಕಾಫಿಯಿಂದ ಹಿಡಿದು ವಿವಿಧ ಸಿಹಿತಿನಿಸುಗಳವರೆಗೆ ಹಾಲು ನಮ್ಮ ದಿನನಿತ್ಯದ ಆಹಾರ ಸಂಸ್ಕೃತಿಯ ಭಾಗವಾಗಿದೆ.

**ಸಮತೋಲಿತ ಸೇವನೆಯೇ ಉತ್ತಮ**

ಯಾವುದೇ ಆಹಾರ ಪದಾರ್ಥದಂತೆ ಹಾಲನ್ನೂ ಅಗತ್ಯಕ್ಕೆ ಅನುಗುಣವಾಗಿ ಸೇವಿಸುವುದು ಮುಖ್ಯ. ಹೆಚ್ಚು ಸಕ್ಕರೆ ಸೇರಿಸಿದ ಹಾಲಿನ ಪಾನೀಯಗಳು ಅಥವಾ ಹಾಲಿನಿಂದ ತಯಾರಿಸಿದ ಅತಿಯಾದ ಸಿಹಿ ಪದಾರ್ಥಗಳನ್ನು ನಿಯಮಿತವಾಗಿ ಹೆಚ್ಚು ಸೇವಿಸುವುದಕ್ಕಿಂತ ಸರಳವಾದ ಹಾಲು, ಮೊಸರು ಅಥವಾ ಮಜ್ಜಿಗೆಯಂತಹ ಆಯ್ಕೆಗಳನ್ನು ಸಮತೋಲಿತ ಆಹಾರದ ಭಾಗವನ್ನಾಗಿ ಮಾಡಬಹುದು.

**ಕೊನೆಯ ಮಾತು**

ಹಸುವಿನ ಹಾಲು ನಮ್ಮ ಆಹಾರ ಪದ್ಧತಿ, ಗ್ರಾಮೀಣ ಆರ್ಥಿಕತೆ ಮತ್ತು ಸಂಸ್ಕೃತಿಯೊಂದಿಗೆ ಬೆಸೆದುಕೊಂಡಿರುವ ಪ್ರಮುಖ ಆಹಾರ ಪದಾರ್ಥವಾಗಿದೆ. ಕ್ಯಾಲ್ಸಿಯಂ, ಪ್ರೋಟೀನ್ ಸೇರಿದಂತೆ ಹಲವು ಪೋಷಕಾಂಶಗಳನ್ನು ಒದಗಿಸುವ ಸಾಮರ್ಥ್ಯ ಹೊಂದಿರುವ ಹಾಲು ಸಮತೋಲಿತ ಆಹಾರದ ಒಂದು ಭಾಗವಾಗಬಹುದು. ಆದರೆ ಹಾಲನ್ನು 'ಎಲ್ಲಾ ಸಮಸ್ಯೆಗಳಿಗೆ ಪರಿಹಾರ' ಎಂದು ನೋಡುವುದಕ್ಕಿಂತ, ಶುದ್ಧತೆ, ಗುಣಮಟ್ಟ, ವೈಯಕ್ತಿಕ ದೇಹದ ಅಗತ್ಯ ಮತ್ತು ಸಮತೋಲಿತ ಆಹಾರ ಎಂಬ ನಾಲ್ಕು ಅಂಶಗಳನ್ನು ಗಮನಿಸುವುದು ಅತ್ಯಂತ ಮುಖ್ಯ.

ರೈತನ ಪರಿಶ್ರಮದಿಂದ ನಮ್ಮ ಮನೆಗೆ ತಲುಪುವ ಪ್ರತಿಯೊಂದು ಹಾಲಿನ ಹನಿಯ ಹಿಂದೆ ಹಸುವಿನ ಆರೈಕೆ, ರೈತನ ಶ್ರಮ, ಪ್ರಕೃತಿಯ ಕೊಡುಗೆ ಮತ್ತು ಹೈನುಗಾರಿಕೆಯ ದೊಡ್ಡ ವ್ಯವಸ್ಥೆಯಿದೆ. ಆದ್ದರಿಂದ ಹಾಲಿನ ಮಹತ್ವವನ್ನು ಅರಿತು, ಅದನ್ನು ವ್ಯರ್ಥ ಮಾಡದೆ, ಸುರಕ್ಷಿತವಾಗಿ ಮತ್ತು ಸಮತೋಲಿತವಾಗಿ ಬಳಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

**"ಹಾಲಿನ ಪ್ರತಿಯೊಂದು ಹನಿಯಲ್ಲೂ ಪೋಷಣೆಯ ಜೊತೆಗೆ ರೈತನ ಪರಿಶ್ರಮದ ಕಥೆಯೂ ಅಡಗಿದೆ."**

ವಿನಾಯಕ ಬಿ. ತಿಪ್ಪಣ್ಣನವರ

ಈ ನಮ್ಮ ಧೃತಿ ನ್ಯೂಸ್
E NAMMA DHURTHI NEWS
KANNADA DAILY NEWS PAPER

## ಪತಿಯ ಹೊಟ್ಟೆ ಸೀಳಿ ಕರುಳನ್ನು ಚೀಲಕ್ಕೆ ತುಂಬಿದ ಪತ್ನಿ



ಕುರುಕ್ಷೇತ್ರ: ಮಹಿಳೆಯೊಬ್ಬರು ಪತಿಯನ್ನು ಕೊಲೆ ಮಾಡಿ, ಬಳಿಕ ಆತನ ಹೊಟ್ಟೆ ಬಗೆದು ಹೊರಬಂದಿದ್ದ ಕರುಳನ್ನು ಪ್ಲಾಸ್ಟಿಕ್ ಚೀಲಕ್ಕೆ ತುಂಬಿದ ಭೀಕರ ಘಟನೆ ಹರಿಯಾಣದ ಕುರುಕ್ಷೇತ್ರದಲ್ಲಿ ನಡೆದಿದೆ. ಪೆಹೋವಾ ರಸ್ತೆಯ ರಾಜ್ ಪ್ಯಾಲೇಸ್ ಸಮೀಪದ ಮನೆಯೊಂದರಲ್ಲಿ ಈ ಘಟನೆ ನಡೆದಿದೆ. ಮೃತನನ್ನು ಉತ್ತರ ಪ್ರದೇಶದ ಧಾಂಪುರ ಗ್ರಾಮದ ನಿವಾಸಿ ರಾಜೇಶ್ (40) ಎಂದು ಗುರುತಿಸಲಾಗಿದೆ. ಅವರು ಸುಮಾರು ಒಂದು ವರ್ಷದಿಂದ ಪತ್ನಿ ವಿಮ್ಲಾ ದೇವಿ ಜತೆ ಇಲ್ಲಿ ವಾಸಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ರಾಜೇಶ್ ಖಾಸಗಿ ಕಂಪನಿಯೊಂದರಲ್ಲಿ ನೀರು ಪೂರೈಕೆ ಸಿಬ್ಬಂದಿಯಾಗಿ ಕೆಲಸ ಮಾಡುತ್ತಿದ್ದರು. ಮನೆಯ ಮಾಲೀಕ ರಿಂಕು ಅವರ ಪ್ರಕಾರ, ಶನಿವಾರ ಸಂಜೆ ಸುಮಾರು 5 ಗಂಟೆಗೆ ದಂಪತಿ ಜೋರಾಗಿ ಜಗಳವಾಡುತ್ತಿರುವುದು ಕೇಳಿಸಿತ್ತು. ಮಹಡಿಗೆ ತೆರಳಿ ನೋಡಿದಾಗ ರಾಜೇಶ್ ರಕ್ತದ ಮಡುವಿನಲ್ಲಿ ಬಿದ್ದಿದ್ದು, ಹೊಟ್ಟೆಯಲ್ಲಿ ಆಳವಾದ ಗಾಯವಾಗಿತ್ತು. ಅಲ್ಲದೆ, ವಿಮ್ಲಾ ದೇವಿ ಆತನ ಹೊಟ್ಟೆಯಿಂದ ಹೊರಬಂದಿದ್ದ ಕರುಳನ್ನು ಪ್ಲಾಸ್ಟಿಕ್ ಚೀಲಕ್ಕೆ ಹಾಕುತ್ತಿದ್ದುದನ್ನು ಕಂಡಿದ್ದಾಗಿ ಪೊಲೀಸರಿಗೆ ತಿಳಿಸಿದ್ದಾರೆ. ಮನೆಯ ಮಾಲೀಕನನ್ನು ನೋಡಿದ ದೇವಿ ಗಾಬರಿಗೊಂಡು ಮಹಡಿಯಿಂದ ಕೆಳಗೆ ಜಿಗಿದಿದ್ದಾರೆ. ಈ ವೇಳೆ ಗಂಭೀರವಾಗಿ ಗಾಯಗೊಂಡ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.ಈ ನಡುವೆ, ಮರಣೋತ್ತರ ಪರೀಕ್ಷೆಯಲ್ಲಿ ಮೃತನ ಯಕೃತ್ತಿನ ಅರ್ಧದಷ್ಟು ಭಾಗ ಹಾಗೂ ಬಲ ಮೂತ್ರಪಿಂಡ ನಾಪತ್ತೆಯಾಗಿರುವುದು ಪತ್ತೆಯಾಗಿದೆ. ಅಂಗಗಳು ನಾಪತ್ತೆಯಾಗಿರುವುದಕ್ಕೂ ಕೊಲೆಗೂ ಸಂಬಂಧವಿದೆಯೇ ಎಂಬ ಬಗ್ಗೆಯೂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಘಟನಾ ಸ್ಥಳದಿಂದ ವಿವಿಧ ಗಾತ್ರದ ಮೂರು ಚಾಕುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಮನೆಯ ಮಾಲೀಕರ ಪ್ರಕಾರ, ದೇವಿ ಸಾಂಪ್ರದಾಯಿಕ ಚಿಕಿತ್ಸೆ ಹಾಗೂ ಮಾಟ-ಮಂತ್ರದಂತಹ ಆಚ-ರಣೆಗಳಲ್ಲಿ ತೊಡಗಿಸಿಕೊಂಡಿದ್ದರು. ದಂಪತಿ ಆಗಾಗ್ಗೆ ಜಗಳವಾಡುತ್ತಿದ್ದರು ಎನ್ನಲಾಗಿದೆ. ಹಲವು ವರ್ಷಗಳ ಹಿಂದೆ ವಿವಾಹವಾಗಿದ್ದ ದಂಪತಿಗೆ ಮಕ್ಕಳಿರಲಿಲ್ಲ. ಆದರೆ, ಕೊಲೆಯ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ದೇವಿ ಸದ್ಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಆರೋಗ್ಯ ಸುಧಾ-ರಿಸಿದ ಬಳಿಕ ಅವರನ್ನು ವಿಚಾರಣೆ ನಡೆಸಲಾಗುವುದು ಎಂದು ಆದ-ರ್ಶ ಪೊಲೀಸ್ ಠಾಣೆಯ ಸುರೇಂದ್ರ ಸಂಧು ತಿಳಿಸಿದ್ದಾರೆ. ಬಳಿಕ ಬಂಧನ ಹಾಗೂ ವಿಚಾರಣೆಗೆ ಸಂಬಂಧಿಸಿದಂತೆ ಕಾನೂನು ಪ್ರಕ್ರಿಯೆ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಕೊಲೆಯ ಹಿಂದಿನ ಕಾರಣ ಹಾಗೂ ಯಕೃತ್ತು ಮತ್ತು ಮೂತ್ರಪಿಂಡ ನಾಪತ್ತೆಯಾಗಿರುವುದರ ನಡುವಿನ ಸಂಬಂಧದ ಬಗ್ಗೆಯೂ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ರೈಲಿನೊಳಗೆ ಸೂಟ್‌ಕೇಸ್‌ನಲ್ಲಿ ಯುವತಿಯ ತುಂಡಾದ ಭಾಗಗಳು ಪತ್ತೆ



ಚೆನ್ನೈ: ಚೆನ್ನೈನಿಂದ ನವದೆಹಲಿಗೆ ತೆರಳುತ್ತಿದ್ದ ಎಕ್ಸ್‌ಪ್ರೆಸ್ ರೈಲಿನ ಸೂಟ್‌ಕೇಸ್‌ನಲ್ಲಿ ಕೊಳೆತ ಸ್ಥಿತಿಯಲ್ಲಿ ಯುವತಿಯ ದೇಹದ ಭಾಗಗಳು ಪತ್ತೆಯಾಗಿರುವ ಘಟನೆ ಬೆಳಕಿಗೆ ಬಂದಿದೆ.ಪ್ರಕರಣದ ತನಿಖೆ ಕೈಗೊಂಡ ರೈಲ್ವೆ ಪೊಲೀಸರು ಮೃತ ಯುವತಿಯನ್ನು ಒಡಿಶಾ ಮೂಲದ ಹಯುಥನ್ ನಿಶಾ (28) ಎಂದು ಗುರುತಿಸಿದ್ದಾರೆ.

ಕಳೆದ ಆ.5ರಂದು ಚೆನ್ನೈ ಸೆಂಟ್ರಲ್‌ನಿಂದ ದೆಹಲಿಗೆ ತೆರಳುತ್ತಿದ್ದ ರೈಲು ಆಗ್ರಾ ನಿಲ್ದಾಣ ತಲುಪಿದಾಗ, ಬೋಗಿಯಲ್ಲಿದ್ದ ಸೂಟ್‌ಕೇಸ್‌ನಿಂದ ತೀವ್ರ ದುರ್ವಾಸನೆ ಬರುತ್ತಿರುವುದು ಗಮನಕ್ಕೆ ಬಂದಿದೆ. ರೈಲ್ವೆ ಪೊಲೀಸರು ಸೂಟ್‌ಕೇಸ್ ಪರಿಶೀಲಿಸಿದಾಗ ಅದರಲ್ಲಿ ಕತ್ತರಿಸಿದ ಮಾನವ ದೇಹದ ಭಾಗಗಳು ಪತ್ತೆಯಾಗಿದ್ದವು. ಆಗ್ರಾ ಪೊಲೀಸರಿಂದ ಮಾಹಿತಿ ಪಡೆದ ಚೆನ್ನೈ ಪೊಲೀಸರು ಚೆನ್ನೈ ಸೆಂಟ್ರಲ್ ರೈಲು ನಿಲ್ದಾಣದ ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಿದ್ದಾರೆ. ಈ ವೇಳೆ ಇಬ್ಬರು ವ್ಯಕ್ತಿಗಳು ಅದೇ ಮಾದ-ರಿಯ ಟ್ರಾಲಿ ಸೂಟ್‌ಕೇಸ್‌ನೊಂದಿಗೆ ರೈಲು ಹತ್ತಿರುವುದು ದೃಶ್ಯಾವಳಿಯಲ್ಲಿ ದಾಖಲಾಗಿತ್ತು. ತನಿಖೆಯ ಆಧಾರದ ಮೇಲೆ ಶಂಕಿತರನ್ನು ಮಾಣಿಕ್ ಉದ್ದೀನ್ ಲಸ್ಕರ್ ಮತ್ತು ಭಾಗಬತಿ ಮಾ-ಝಿ ಎಂದು ಗುರುತಿಸಿದ ಪೊಲೀಸರು, ಚೆನ್ನೈ ಹೊರವಲಯದ ಗೂಡುವಾಂಚೇರಿಯಲ್ಲಿರುವ ಅವರ ಬಾಡಿಗೆ ಮನೆ ಮೇಲೆ ದಾಳಿ ನಡೆಸಿದರು. ಮನೆಯ ಶೋಧದ ವೇಳೆ ಅಡುಗೆ ಪಾತ್ರೆಯೊಂದರಲ್ಲಿ ಮಹಿಳೆಯ ದೇಹದ ಮತ್ತಷ್ಟು ಕೊಳೆತ ಭಾಗಗಳು ಪತ್ತೆಯಾಗಿವೆ. ಇದರಿಂದ ಪ್ರಕರಣ ಮತ್ತಷ್ಟು ಗಂಭೀರ ಸ್ವರೂಪ ಪಡೆದುಕೊಂಡಿದೆ. ಇಬ್ಬರೂ ಶಂಕಿತರು ಸದ್ಯ ತಲೆಮರೆಸಿಕೊಂಡಿದ್ದು, ಅವರ ಪತ್ತೆಗಾಗಿ ವಿಶೇಷ ತನಿಖಾ ತಂಡಗಳನ್ನು ರಚಿಸಲಾಗಿದೆ. ಆಗ್ರಾ ರೈಲಿನಲ್ಲಿ ಪತ್ತೆಯಾದ ಸೂಟ್‌ಕೇಸ್‌ನಲ್ಲಿದ್ದ ದೇಹದ ಭಾಗಗಳು ಹಾಗೂ ಚೆನ್ನೈನ ಮನೆಯಲ್ಲಿ ಪತ್ತೆಯಾದ ದೇಹದ ಭಾಗಗಳು ಒಂದೇ ಮಹಿಳೆಗೆ ಸೇರಿವೆಯೇ ಎಂಬುದನ್ನು ವೈಜ್ಞಾನಿಕವಾಗಿ ಖಚಿತಪಡಿಸಿಕೊಳ್ಳಲು ಮಾದರಿಗಳನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಮೃತ ಮಹಿಳೆಯ ಮಗ ಚೆನ್ನೈನಲ್ಲಿ ನಾಪತ್ತೆ ದೂರು ದಾಖಲಿಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಹಣಕಾಸಿನ ವಿವಾದ ಅಥವಾ ಅಕ್ರಮ ಸಂಬಂಧದ ಹಿನ್ನೆಲೆಯಲ್ಲಿ ಈ ಹತ್ಯೆ ನಡೆದಿರಬಹುದೇ ಎಂಬುದೂ ಸೇ-ರಿದಂತೆ ವಿವಿಧ ಆಯಾಮಗಳಲ್ಲಿ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಈ ನಮ್ಮ ಧೃತಿ ನ್ಯೂಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.
ಮೊ: 7353595904

# H1N1 ಸೋಂಕು : ಶಾಲಾ-ಕಾಲೇಜುಗಳಲ್ಲಿ ಮುಂಜಾಗ್ರತಾ ಕ್ರಮಕ್ಕೆ ಮಾರ್ಗಸೂಚಿ ಪ್ರಕಟ



ಬೆಂಗಳೂರು: ರಾಜ್ಯದಲ್ಲಿ ಎಚ್‌1ಎನ್‌1 ಸೋಂಕು ಹರಡುತ್ತಿರುವ ಹಿನ್ನೆಲೆಯಲ್ಲಿ ಶಾಲಾ-ಕಾಲೇಜುಗಳಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಮಾರ್ಗಸೂಚಿ ರವಾನಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಜನವರಿಯಿಂದ ರಾಜ್ಯದಲ್ಲಿ 4,212 ಎಚ್‌1ಎನ್‌1 ಪ್ರಕರಣಗಳು ಪತ್ತೆಯಾಗಿವೆ. ಅದರಲ್ಲೂ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಹೆಚ್ಚಿನ ಪ್ರಕರಣಗಳು ವರದಿಯಾಗಿವೆ ಎಂದು ತಿಳಿಸಿದರು.

ಸಾಂಕ್ರಾಮಿಕ ರೋಗಗಳ ಕು-ರಿತು ಜನರಲ್ಲಿ ಹೆಚ್ಚಿನ ಜಾಗೃತಿ ಅಗತ್ಯವಿದೆ. ಸಾರ್ವಜನಿಕರು ಮುಂಜಾಗ್ರತಾ ಕ್ರಮಗಳನ್ನು ಪಾಲಿಸಬೇಕು. ಬಿಸಿ ನೀರನ್ನೇ ಕುಡಿಯಬೇಕು ಹಾಗೂ ಹೋಟೆಲ್‌ಗಳಲ್ಲಿಯೂ ಬಿಸಿನೀರನ್ನು ಒದಗಿಸಬೇಕು. ಜ್ವರ ಇರುವವರು ಜನರ ನಡುವೆ ಓಡಾಡುವುದನ್ನು ನಿಯಂತ್ರಿಸಬೇಕು. ಎರಡು-ಮೂರು ದಿನಗಳ ಬಳಿಕವೂ ಜ್ವರ ಕಡಿಮೆಯಾಗದಿದ್ದರೆ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕು ಎಂದು ಸಲಹೆ ನೀಡಿದರು. ಮಾಧ್ಯಮಗಳಲ್ಲಿ ವರದಿಯಾದಂತೆ ಯಾವುದೇ ಶಾಲೆಯಲ್ಲಿ ಎಚ್‌1ಎನ್‌1 ಸೋಂಕು ವ್ಯಾಪಕವಾಗಿ ಹರಡಿರುವ ಬಗ್ಗೆ ವರದಿಯಾಗಿಲ್ಲ. ಒಂದು ಶಾಲೆಯ ಇಬ್ಬರು ಶಿಕ್ಷಕರಿಗೆ ಜ್ವರ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಅವರು ಶಾಲೆಗೆ ಬಂದಿರಲಿಲ್ಲ. ಬಳಿಕ ಯಾವುದೇ ವಿದ್ಯಾರ್ಥಿಗಳಿಗೂ ಸೋಂಕು ಹರಡಿರುವುದು ಕಂಡುಬಂದಿಲ್ಲ. ಇದನ್ನೇ ಸೋಂಕು ವ್ಯಾಪಕವಾಗಿ ಹರಡಿದೆ ಎಂದು ಪ್ರಚಾರ ಮಾಡಲಾಗಿದೆ. ಇದು ಸತ್ಯವಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

ಗೊಂದಲ ನಿವಾರಿಸುವ ಉದ್ದೇಶದಿಂದ ರಾಜ್ಯದ ಎಲ್ಲ ಶಾಲಾ-ಕಾಲೇಜುಗಳಿಗೆ ಸಾಂಕ್ರಾಮಿಕ ರೋಗಗಳ ಸಂದರ್ಭದಲ್ಲಿ ಅನುಸರಿಸಬೇಕಾದ ಸುರಕ್ಷತಾ ಕ್ರಮಗಳ ಕುರಿತು ಮಾರ್ಗಸೂಚಿ ರವಾನಿಸಲಾಗುವುದು ಎಂದರು. ಎಚ್‌1ಎನ್‌1 ಸೋಂಕು ಪತ್ತೆಯಾದರೂ ಚಿಕಿತ್ಸೆ ನೀಡಲು ರಾಜ್ಯ ಆರೋಗ್ಯ ಇಲಾಖೆ ಸಿದ್ಧವಾಗಿದೆ. ಅಗತ್ಯವಿರುವ ಕಡೆ ಪ್ರತ್ಯೇಕ ಬೆಡ್‌ಗಳ ವ್ಯವಸ್ಥೆ ಮಾಡಲಾಗಿದೆ. ಔಷಧಿಗಳ ದಾಸ್ತಾನು ಲಭ್ಯವಿದ್ದು, ಅಗತ್ಯ ಔಷಧಿಗಳ ಖರೀದಿಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಗಳಿಗೆ ಅನುಮೋದನೆ ನೀಡಲಾಗಿದೆ. 15 ದಿನಗಳಲ್ಲಿ ಅಗತ್ಯ ಔಷಧಿಗಳನ್ನು ಖರೀದಿಸಿ ಜಿಲ್ಲಾ ಕೇಂದ್ರಗಳಿಗೆ ಸರಬರಾಜು ಮಾಡಲಾಗುವುದು. ತುರ್ತು ಅಗತ್ಯವಿದ್ದಲ್ಲಿ ಜಿಲ್ಲಾ ಮಟ್ಟದಲ್ಲಿಯೂ ಔಷಧಿ ಖರೀದಿಸಲು ಅನುಮತಿ ನೀಡಲಾಗಿದೆ ಎಂದು ಹೇಳಿದರು.

**ನಕಲಿ ಔಷಧಿ ಪ್ರಕರಣ ತನಿಖೆ ಮುಂದುವರಿಕೆ**

ನಕಲಿ ಔಷಧಿಗಳ ಕುರಿತ ತನಿಖೆ ಪ್ರಗತಿಯಲ್ಲಿದೆ. ಅಧಿಕೃತ ಮಾಹಿತಿ ದೊರೆತ ಬಳಿಕ ಅದನ್ನು ಸಾರ್ವಜನಿಕರೊಂದಿಗೆ ಹಂಚಿಕೊಳ್ಳಲಾಗುವುದು. ಸದ್ಯದ ಮಾಹಿತಿಯ ಪ್ರಕಾರ ಯಾವುದೇ ಸರ್ಕಾರಿ ಆಸ್ಪತ್ರೆಗಳಿಗೆ ನಕಲಿ ಔಷಧಿಗಳು ಸರಬರಾಜಾಗಿಲ್ಲ. ಎಲ್ಲೆಲ್ಲಿ ಇಂತಹ ಔಷಧಿಗಳು ಸರಬರಾಜಾಗಿವೆ ಎಂಬುದರ ಕುರಿತು ಪರಿಶೀಲನೆ ನಡೆಯುತ್ತಿದೆ. ಮಾಹಿತಿ ದೊರೆತ ತಕ್ಷಣ ಕ್ರಮ ಕೈಗೊಳ್ಳಲಾಗುವುದು ಎಂದರು. ಕೆಲವು ಸಂದರ್ಭಗಳಲ್ಲಿ ನಕಲಿ ಮತ್ತು ಅಸಲಿ ಔಷಧಿಗಳನ್ನು ಗುರುತಿಸುವುದು ಕಷ್ಟವಾಗುತ್ತಿದೆ. ಗುಪ್ತಚರ ವಿಭಾಗದ ಅಧಿಕಾರಿಗಳು ನಕಲಿ ಔಷಧಿಗಳು ಎಲ್ಲೆಲ್ಲಿ ತಯಾರಾಗುತ್ತಿವೆ ಹಾಗೂ ಯಾವ ಪ್ರದೇಶಗಳಿಗೆ ಸರಬರಾಜಾಗುತ್ತಿವೆ ಎಂಬ ಬಗ್ಗೆ ಮಾಹಿತಿ ಕಲೆಹಾಕುತ್ತಿದ್ದಾರೆ ಎಂದು ಹೇಳಿದರು.

**ಕೃತಕ ಆಹಾರ ಪದಾರ್ಥಗಳ ವಿರುದ್ಧ ಕ್ರಮ**

ಕೃತಕವಾಗಿ ಉತ್ಪಾದಿಸುವ ಆಹಾರ ಪದಾರ್ಥಗಳು ಅಪಾಯಕಾರಿಯಾಗಿರುವ ಹಿನ್ನೆಲೆಯಲ್ಲಿ ಅವುಗಳನ್ನು ನಿಷೇಧಿಸಲಾಗಿದೆ. ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಒಂದು ವರ್ಷದವರೆಗೆ ಮಾತ್ರ ನಿಷೇಧ ವಿಧಿಸುವ ಅವಕಾಶವಿದೆ. ಈ ಕುರಿತು ಕೇಂದ್ರ ಕಾಯ್ದೆಯಲ್ಲಿಯೂ ತಿದ್ದುಪಡಿ ಅಗತ್ಯವಿದ್ದು, ಕೇಂದ್ರ ಆರೋಗ್ಯ ಸಚಿವರೊಂದಿಗೆ ಪತ್ರ ವ್ಯವಹಾರ ನಡೆಸಲಾಗಿದೆ ಎಂದು ಸಚಿವರು ತಿಳಿಸಿದರು.

# ಸಚಿವ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ವಿಪಕ್ಷಗಳ ವಿಫಲ ಯತ್ನ




ಬೆಂಗಳೂರು: ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ-ಜೆಡಿ-ಎಸ್ ಮತ್ತೆ ಸರ್ಕಾರದ ವಿರುದ್ಧ ಸಮರ ಸಾರಿದ್ದು, ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ನಡೆಸಿದ ಯತ್ನವನ್ನು ಪೊಲೀಸರು ವಿಫಲಗೊಳಿಸಿದ್ದಾರೆ.ಸರ್ಕಾರದ ವಿರುದ್ಧ ಇದೇ ಮೊದಲ ಬಾರಿಗೆ ಗಟ್ಟಿ ಧ್ವನಿಯಲ್ಲಿ ಪ್ರತಿಭಟನೆ ನಡೆಸಿದ ಎರಡೂ ಪಕ್ಷಗಳ ಶಾಸಕರು ವಿಧಾನಸೌಧದ ನಾಲ್ಕು ಗೇಟ್‌ಗಳನ್ನು ಗು-ರಿಯಾಗಿಸಿಕೊಂಡು ಮುತ್ತಿಗೆ ಹಾಕಲು ಯತ್ನಿಸಿದರು.

ಫ್ರೀಡಂಪಾರ್ಕ್‌ನಿಂದ ಒಂದು ತಂಡ, ರಾಜಭವನದಿಂದ ಮತ್ತೊಂದು ತಂಡ, ಶಾಸಕರ ಭವನದಿಂದ ಮೂರನೇ ತಂಡ ಹಾಗೂ ಮಾಹಿತಿ ಹಕ್ಕು ಆಯೋಗದಿಂದ ನಾಲ್ಕನೇ ತಂಡ ಹೀಗೆ ಒಟ್ಟು ನಾಲ್ಕು ತಂಡಗಳಲ್ಲಿ ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಲಾಯಿತು. ಆದರೆ, ಪೊಲೀಸರು ಸರ್ಪಗಾವಲು ಹಾಕಿ ಮಾರ್ಗಮಧ್ಯೆಯೇ ಬಿಜೆಪಿ ಮತ್ತು ಜೆಡಿಎಸ್ ಶಾಸಕರನ್ನು ವಶಕ್ಕೆ ಪಡೆದರು. ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸೇ-ರಿದಂತೆ ಬಿಜೆಪಿ ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.ಮಾಜಿ ಸಚಿವ ರಾಜೂಗೌಡ, ಶಾಸಕ ಮುನಿರತ್ನ ಸೇರಿದಂತೆ ಹಲವು ನಾಯಕರು ಹಾಗೂ ಬಿಜೆಪಿ ಕಾರ್ಯಕರ್ತರು ಫ್ರೀಡಂಪಾರ್ಕ್‌ನಲ್ಲಿ ಜಮಾಯಿಸಿ ನಾಗೇಂದ್ರ ವಿರುದ್ಧ ಘೋಷಣೆಗಳನ್ನು ಕೂಗಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ಪ್ರಕರಣದಲ್ಲಿ ಆರೋಪ ಎದು-ರಿಸುತ್ತಿರುವ ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಹಾಗೂ ವಾಲ್ಮೀಕಿ ಸಮುದಾಯಕ್ಕೆ ಕಾಂಗ್ರೆಸ್ ದ್ರೋಹ ಮಾಡಿದೆ ಎಂಬ ಬರಹವಿರುವ ಫಲಕಗಳನ್ನು ಹಿಡಿದು ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ವಿಧಾನಸೌಧದ ಸುತ್ತಲೂ ಪೊಲೀಸರು ಭದ್ರತೆ ಹೆಚ್ಚಿಸಿ, ವಿವಿಧ ಗೇಟ್‌ಗಳಿಗೆ ಬ್ಯಾರಿಕೇಡ್‌ಗಳನ್ನು ಅಳವಡಿಸಿದ್ದರು. ಸದನದ ಕಲಾಪ ನಡೆಯುತ್ತಿದ್ದ ಹಿನ್ನೆಲೆಯಲ್ಲಿ ಸಿಬ್ಬಂದಿ ಮತ್ತು ಗುರುತಿನ ಚೀಟಿ ಹೊಂದಿರುವವ-ರಿಗೆ ಮಾತ್ರ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿ-ತ್ತು. ಪ್ರತಿಭಟನಾಕಾರರು ಏಕಾಏಕಿ ಮುನ್ನುಗ್ಗಲು ಯತ್ನಿಸಿದಾಗ ತಳ್ಳಾಟ-ನೂಕಾಟದ ಪರಿಸ್ಥಿತಿ ನಿರ್ಮಾಣವಾಯಿತು. ವಿಧಾನಸೌಧದ ಪ್ರವೇಶದ್ವಾರಗಳ ಬಳಿಯೇ ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದರು.ಕೆಲ ಕಾರ್ಯಕರ್ತರು ಪೊಲೀಸರ ಕೈಗೆ ಸಿಗದೆ ಮೆಟ್ರೊ ನಿಲ್ದಾಣದತ್ತ ತೆರಳಲು ಯತ್ನಿಸಿದಾಗ, ಅವರನ್ನು ಪೊಲೀಸರು ಬೆನ್ನಟ್ಟಿ ವಶಕ್ಕೆ ಪಡೆದರು.

ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ನೂರಾರು ಕಾರ್ಯಕರ್ತರು ಫ್ರೀಡಂಪಾರ್ಕ್‌ನಿಂದ ವಿಧಾನಸೌಧದ ಕಡೆಗೆ ಮೆರವಣಿಗೆ ತೆರಳಿ ಮುತ್ತಿಗೆ ಹಾಕಲು ಯತ್ನಿಸಿದರು. ಪ್ರತಿಭಟನೆಯ ಹಿನ್ನೆಲೆಯಲ್ಲಿ ವಿಧಾನಸೌಧದ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಎಲ್ಲ ಪ್ರಮುಖ ಗೇಟ್‌ಗಳ ಬಳಿ ನಾಕಾಬಂದಿ ನಡೆಸಲಾಗಿದ್ದು, ಪ್ರತಿಭಟನಾಕಾರರು ಒಳನುಗ್ಗದಂತೆ ಪೊಲೀಸರು ಕಟ್ಟುನಿಟ್ಟಿನ ಕ್ರಮ ಕೈಗೊಂಡರು. ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆ ವಿಚಾರವಾಗಿ ಬಿಜೆಪಿ ಮತ್ತು ಜೆಡಿ-ಎಸ್ ಕಳೆದ ಹಲವು ದಿನಗಳಿಂದ ವಿಧಾನಸಭೆ ಹಾಗೂ ವಿಧಾನಪರಿಷತ್‌ನಲ್ಲೂ ಪ್ರತಿಭಟನೆ ನಡೆಸುತ್ತಿವೆ. ಕಳೆದ ವಾರ ಹಲವು ದಿನಗಳ ಕಾಲ ಪ್ರತಿಪಕ್ಷದ ಪ್ರತಿಭಟನೆಯಿಂದ ಸದನದ ಕಲಾಪಕ್ಕೂ ಅಡ್ಡಿಯುಂಟಾಗಿತ್ತು.

**2024ರಲ್ಲಿ ಬೆಳಕಿಗೆ ಬಂದ ಪ್ರಕರಣ**

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣ 2024ರಲ್ಲಿ ಬೆಳಕಿಗೆ ಬಂದಿತ್ತು. ನಿಗಮದ ಲೆಕ್ಕಪರಿಶೋಧಕ ಅಧೀಕ್ಷಕ ಪಿ. ಚಂದ್ರಶೇಖರನ್ ಆತ್ಮಹತ್ಯೆ ಮಾಡಿಕೊಂಡು ಬರೆದಿದ್ದ ಪತ್ರದಲ್ಲಿ ಹಣ-ಕಾಸು ಅಕ್ರಮಗಳ ಆರೋಪಗಳು ಕೇಳಿಬಂದ ಬಳಿಕ ಪ್ರಕರಣ ಭಾರಿ ರಾಜಕೀಯ ವಿವಾದಕ್ಕೆ ಕಾರಣವಾಗಿತ್ತು. ನಾಗೇಂದ್ರ ಅವರನ್ನು ಸಂಪುಟದಿಂದ ಕೈಬಿಡುವವರೆಗೂ ಹೋರಾಟ ಮುಂದುವರಿಸುವುದಾಗಿ ಬಿಜೆಪಿ ನಾಯಕರು ಹೇಳಿದ್ದಾರೆ. ವಾಲ್ಮೀಕಿ ಸಮುದಾಯಕ್ಕೆ ಸೇರಿದ ಕಲ್ಯಾಣ ನಿಧಿಯ ದುರ್ಬಳಕೆಯ ಆರೋಪ ಎದುರಿಸುತ್ತಿರುವ ವ್ಯಕ್ತಿ ಸಚಿವ ಸ್ಥಾನದಲ್ಲಿ ಮುಂದುವರಿಯುವುದು ನೈತಿಕವಾಗಿ ಮತ್ತು ಸಾಂವಿಧಾನಿಕವಾಗಿ ಸರಿಯಲ್ಲ ಎಂಬುದು ಪ್ರತಿಪಕ್ಷದ ವಾದವಾಗಿದೆ.

# ನ್ಯಾಟೋ ಮಾದರಿಯ ಮುಸ್ಲಿಂ ರಾಷ್ಟ್ರಗಳ ಮೆಕ್ಕಾ ರಕ್ಷಣಾ ಒಕ್ಕೂಟಕ್ಕೆ ಇರಾನ್‌ಗೆ ಆಹ್ವಾನ



ಟೆಹ್ರಾನ್: ಅಮೆರಿಕದೊಂದಿಗೆ ಉದ್ವಿಗ್ನತೆ ಮುಂದುವರಿದಿರುವ ನಡುವೆಯೇ ಸೌದಿ ಅರೇಬಿಯಾ, ಪಾಕಿಸ್ತಾನ ಮತ್ತು ಟರ್ಕಿ ದೇಶಗಳು ಆ.7ರಂದು ಸಹಿ ಹಾಕಿರುವ ಮಹತ್ವದ ಮೆಕ್ಕಾ ಜಂಟಿ ರಕ್ಷಣಾ ಒಪ್ಪಂದಕ್ಕೆ ಸೇರ್ಪಡೆಗೊಳ್ಳುವಂತೆ ಇರಾನ್‌ಗೆ ಅಧಿಕೃತ ಆಹ್ವಾನ ನೀಡಲಾಗಿದೆ. ಟೆಹ್ರಾನ್‌ಗೆ ಈ ಆಹ್ವಾನ ಬಂದಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ ಎಂದು ಇರಾನ್ ಸಂಸತ್ತಿನ ಸುದ್ದಿ ಸಂಸ್ಥೆಯ ಮುಖ್ಯಸ್ಥ ಮೆಹ್ದಿ ರಹೀಮಿ ತಿಳಿಸಿದ್ದಾರೆ ಎಂದು ಅಲ್ ಮಯಾದೀನ್ ವರದಿ ಮಾಡಿದೆ.

ಪಾಕಿಸ್ತಾನದ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರು ಶೀಘ್ರದಲ್ಲೇ ಟೆಹ್ರಾನ್‌ಗೆ ಭೇಟಿ ನೀಡಲಿರುವ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ. ಹೀಗಾಗಿ ರಕ್ಷಣಾ ಒಕ್ಕೂಟದ ವಿಸ್ತರಣೆಯ ಕುರಿತ ಚರ್ಚೆಗೆ ಹೆಚ್ಚಿನ ಮಹತ್ವ ಬಂದಿದೆ. ಸೌದಿ ಅರೇಬಿಯಾ, ಪಾಕಿಸ್ತಾನ ಮತ್ತು ಟರ್ಕಿ ಸಹಿ ಹಾಕಿರುವ ಒಪ್ಪಂದದ ಪ್ರಕಾರ, ಮೂರು ದೇಶಗಳ ಪೈಕಿ ಯಾವುದೇ ಒಂದು ದೇಶದ ಮೇಲೆ ಸಶಸ್ತ್ರ ದಾಳಿ ನಡೆದರೂ ಅದನ್ನು ಮೂರೂ ದೇಶಗಳ ಮೇಲಿನ ದಾಳಿ ಎಂದು ಪರಿಗಣಿಸಲಾಗುತ್ತದೆ.ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಹೆಚ್ಚುತ್ತಿರುವ ಸಂದರ್ಭದಲ್ಲೇ ಈ ಬೆಳವಣಿಗೆ ನಡೆದಿದೆ. ಈ ಐತಿಹಾಸಿಕ ಹೆಜ್ಜೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ವಾಗತಿಸಿದ್ದಾರೆ.

**ಏನಿದು 'ಮುಸ್ಲಿಂ ನ್ಯಾಟೋ'?**

ಸೌದಿ ಅರೇಬಿಯಾ, ಟರ್ಕಿ ಮತ್ತು ಪಾಕಿಸ್ತಾನ ದೇಶಗಳ ನಡುವೆ ಏರ್ಪಟ್ಟಿರುವುದು ತ್ರಿಪಕ್ಷೀಯ ಕಾರ್ಯತಂತ್ರದ ರಕ್ಷಣಾ ಮತ್ತು ಮಿಲಿಟರಿ ಸಹಕಾರ ಒಪ್ಪಂದ. ಆ.7ರಂದು ಸೌದಿ ಅರೇಬಿಯಾದ ಮೆಕ್ಕಾದ ಅಲ್-ಸಫಾ ಅರಮನೆಯಲ್ಲಿ ಈ ಒಪ್ಪಂದಕ್ಕೆ ಅಧಿಕೃತವಾಗಿ ಸಹಿ ಹಾಕಲಾಗಿದೆ. ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಪ್ರಾದೇಶಿಕ ಉದ್ವಿಗ್ನತೆ ಹಾಗೂ ಯುದ್ಧದ ಸನ್ನಿವೇಶಗಳ ಹಿನ್ನೆಲೆಯಲ್ಲಿ ಈ ಮೂರು ಪ್ರಮುಖ ಮುಸ್ಲಿಂ ರಾಷ್ಟ್ರಗಳು ಒಟ್ಟಾಗಿ ಈ ನಿರ್ಧಾರ ಕೈಗೊಂಡಿವೆ. ಒಪ್ಪಂದದ ಪ್ರಮುಖ ಅಂಶವೆಂದರೆ, ಮೈತ್ರಿಕೂಟದ ಯಾವುದೇ ಒಂದು ಸದಸ್ಯ ರಾಷ್ಟ್ರದ ಮೇಲೆ ಹೊರಗಿನಿಂದ ಸಶಸ್ತ್ರ ದಾಳಿ ನಡೆದರೆ, ಅದನ್ನು ಮೂರೂ ದೇಶಗಳ ಮೇಲಿನ ದಾಳಿ ಎಂದು ಪರಿಗಣಿಸುವುದು. ಈ ವ್ಯವಸ್ಥೆಯು ನ್ಯಾಟೋದ ಸಾಮೂಹಿಕ ರಕ್ಷಣಾ ತತ್ವವನ್ನು ಹೋಲುತ್ತದೆ. ಹೀಗಾಗಿ ಇದನ್ನು ಕೆಲವರು 'ಮುಸ್ಲಿಂ ನ್ಯಾಟೋ' ಅಥವಾ 'ಸುನ್ನಿ ಭದ್ರತಾ ಒಕ್ಕೂಟ' ಎಂದು ಕರೆಯುತ್ತಿದ್ದಾರೆ.

**ಬಾಂಗ್ಲಾದೇಶಕ್ಕೂ ಒಲವು**

ಇತ್ತ ಬಾಂಗ್ಲಾದೇಶವೂ ಈ ಒಕ್ಕೂಟಕ್ಕೆ ಸೇರುವ ಬಗ್ಗೆ ಸಕಾರಾತ್ಮಕ ಒಲವು ತೋರಿದೆ ಎನ್ನಲಾಗಿದೆ. ಬಾಂಗ್ಲಾದೇಶದ ವಿದೇಶಾಂಗ ವ್ಯವಹಾರಗಳ ನೂತನ ರಾಜ್ಯ ಸಚಿವ ಹುಮಾಯೂನ್ ಕಬೀರ್ ಅವರು ಒಪ್ಪಂದದ ಭಾಗವಾಗುವ ಸಾಧ್ಯತೆಗಳ ಕುರಿತು ಮಾತನಾಡಿದ್ದು, ರಾಜತಾಂತ್ರಿಕ ಮಾತುಕತೆಗಳ ಮೂಲಕ ಪಾಕಿಸ್ತಾನದೊಂದಿಗಿನ ದ್ವಿಪಕ್ಷೀಯ ಸಂಬಂಧವನ್ನು ಬಲಪಡಿಸಲು ಬಯಸುವುದಾಗಿ ತಿಳಿಸಿದ್ದಾರೆ.

ಇರಾನ್ ಸೇರ್ಪಡೆಗೊಂಡರೆ ಒಕ್ಕೂಟದ ಭೌಗೋಳಿಕ ವ್ಯಾಪ್ತಿ ಮತ್ತು ಕಾರ್ಯತಂತ್ರದ ಮಹತ್ವ ಮತ್ತಷ್ಟು ಹೆಚ್ಚುವ ಸಾಧ್ಯತೆಯಿದೆ. ಇದೇ ವೇಳೆ, ಪಶ್ಚಿಮ ಏಷ್ಯಾದಲ್ಲಿ ಬದಲಾಗುತ್ತಿರುವ ಭದ್ರತಾ ಸಮೀಕರಣಗಳು ಹಾಗೂ ಭಾರತದ ಮೇಲೆ ಉಂಟಾಗಬಹುದಾದ ರಾಜತಾಂತ್ರಿಕ ಮತ್ತು ಕಾರ್ಯತಂತ್ರದ ಪರಿಣಾಮಗಳ ಬಗ್ಗೆಯೂ ಚರ್ಚೆ ಆರಂಭವಾಗಿದೆ.

Publisher and Owned by CHANDRAKANTA From Near Durgamma Temple Dyampur, Koppal District- 583232 Printed at VINAYA Printers, VINAYA Publication Word No.01 Ballary Pootwer, Bhagynagar, Koppal- 583238, Editor : CHANDRAKANTA enammadhruthinews@gmail.com